ಜನಮನದ ದನಿ

# ಪ್ರಜೋದಯ

ಸಂಪಾದಕ : ಜೆ.ಆರ್. ಕೆಂಚೇಗೌಡ



ಅನುಭವಿ ಜೋ ರೂಟ್ ಅವರ ಆಕರ್ಷಕ 160 ರನ್‌ಗಳ ನೆರವಿನಿಂದ ಇಂಗ್ಲೆಂಡ್ ತಂಡ ಆ್ಯಷಸ್ ಸರಣಿಯ ಐದನೇ ಹಾಗೂ ಅಂತಿಮ ಟೆಸ್ಟ್ ಪಂದ್ಯದ ಎರಡನೇ ದಿನ 384 ರನ್‌ಗಳ ಉತ್ತಮ ಮೊತ್ತ ಕಲೆಹಾಕಿತ್ತು.

06 ಜನವರಿ 2026 ಮಂಗಳವಾರ ಬೆಲೆ ₹ 2.00 ಸಂಪುಟ : 19 ಸಂಚಿಕೆ : 294 ಪುಟ-4 ಹಾಸನ E-mail : prajodayahsn@gmail.com RNI NO: KARKAN/2007/22629


ಸಾಲುಮರದ ಸಾಧಕಿಯೊಂದಿಗೆ ಮೊದಲ ಭೇಟಿ » 2


ಗ್ರಾಮೀಣ ಕ್ರೀಡೆಗಳಿಗೆ ಕೇಂದ್ರದಿಂದ ಹೆಚ್ಚಿನ ಪ್ರೋತ್ಸಾಹ » 3


ಕೋಪ ಮನುಷ್ಯನ ಮೊದಲ ಶತ್ರು : ಕೋಡಿ ಶ್ರೀ » 4

# ಕಾಂಗ್ರೆಸ್‌ನಿಂದ ಸಮಾಜ ಒಡೆಯುವ ಕೆಲಸ

- ಮಾಜಿ ಪ್ರಧಾನಿ ಮಗನನ್ನು ಮನೆಗೆ ನುಗ್ಗಿ ಬಂಧಿಸಿದ್ದೀರಿ
- ಬಳ್ಳಾರಿ ಗಲಭೆಕೋರರನ್ನು ಹೋಟೆಲ್‌ನಲ್ಲಿಟ್ಟು ತನಿಖೆ
- ರಾಜ್ಯ ಸರ್ಕಾರದ ವಿರುದ್ಧ ಹೆಚ್.ಡಿ.ಕುಮಾರಸ್ವಾಮಿ ವಾಗ್ದಾಳಿ

• ಪ್ರಜೋದಯ ವರದಿ

**ಬೆಂಗಳೂರು:** ರಾಜ್ಯ ಸರ್ಕಾರ ಸಮಾಜವನ್ನು ಒಡೆಯುವ ಕೆಲಸ ಮಾಡುತ್ತಿದೆ. ಇತಿಹಾಸ ನಿಮ್ಮ ಆಡಳಿತವನ್ನು ಹೇಗೆ ದಾಖಲಿಸಲಿದೆ ಎಂಬುದನ್ನು ನೀವು ಯೋಚಿಸಬೇಕೆಂದು ಹೆಚ್. ಡಿ.ಕುಮಾರಸ್ವಾಮಿ ಅವರು ಕಾಂಗ್ರೆಸ್‌ಗೆ ಎಚ್ಚರಿಕೆ ನೀಡಿದರು.

ಜೆ.ಪಿ.ಭವನದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬಳ್ಳಾರಿ ಗಲಭೆ ಪ್ರಕರಣ ಸಂಬಂಧ ಇಬ್ಬರನ್ನು ಹೋಟೆಲ್‌ನಲ್ಲಿಟ್ಟುಕೊಂಡು ತನಿಖೆ ಮಾಡುತ್ತಿದ್ದಾರಂತೆ. ಆದರೆ, ಮಾಜಿ ಪ್ರಧಾನಿ ಮಗನನ್ನು (ಹೆಚ್.ಡಿ. ರೇವಣ್ಣ ಬಂಧಿಸಿದ್ದ ಬಗ್ಗೆ ಪರೋಕ್ಷವಾಗಿ ಉಲ್ಲೇಖಿಸಿ) ಮನೆಗೆ ನುಗ್ಗಿ ಬಂಧಿಸಿದ್ದೀರಿ. ಅವರೇನು ಅಂತಹ ತಪ್ಪು ಮಾಡಿದ್ದರು. ಎಲ್ಲಾ ನೆನಪು ಇಟ್ಟುಕೊಂಡಿದ್ದೇನೆಂದು ವಾಗ್ದಾಳಿ ನಡೆಸಿದರು.

ಬಳ್ಳಾರಿ ಗುಂಡಿನ ದಾಳಿಯನ್ನು ಮರೆಮಾಚಲು ಕರ್ನಾಟಕ ಸರ್ಕಾರ ವ್ಯವಸ್ಥಿತ ಪಿತೂರಿ ನಡೆಸುತ್ತಿದೆ. ಈ ವಿಷಯವು ಕೇವಲ ಪಕ್ಷದ ಕಾರ್ಯಕರ್ತನ ಹತ್ಯೆಯಲ್ಲ. ಆದರೆ, ಹೊಣೆಗಾರರನ್ನು ರಕ್ಷಿಸಲು ಸರ್ಕಾರ ಮಾಡಿದ ಪ್ರಯತ್ನಗಳಾಗಿವೆ. ಸಂತ್ರಸ್ತನ ದೇಹವನ್ನು ಅಕ್ರಮವಾಗಿ ಎರಡು ಮರಣೋತ್ತರ ಪರೀಕ್ಷೆಗಳಿಗೆ ಒಳಪಡಿಸಲಾಗಿದೆ. ಕರ್ನಾಟಕದಲ್ಲಿ ಕಾನೂನು ಮತ್ತು ಸುವ್ಯವಸ್ಥೆಯ ಕುಸಿತವಾಗಿದೆ. ಪ್ರಕರಣವನ್ನು ಸಿಬಿಐಗೆ ಹಸ್ತಾಂತರಿಸಬೇಕೆಂದು ಒತ್ತಾಯಿಸಿದರು.



**ಸಿಎಂ–ಡಿಸಿಎಂನಿಂದ ಸಂಘರ್ಷದ ಹೇಳಿಕೆ**

**ರಾಜ್ಯ ಸರ್ಕಾರದ ತನಿಖೆಯನ್ನು ಅರ್ಥಹೀನ ಎಂದು ಕರೆದ ಕೇಂದ್ರ ಸಚಿವ ಕುಮಾರಸ್ವಾಮಿ ಅವರು, ಮುಖ್ಯಮಂತ್ರಿ, ಉಪಮುಖ್ಯಮಂತ್ರಿ ಮತ್ತು ಗೃಹ ಸಚಿವರ ಸಂಘರ್ಷದ ಹೇಳಿಕೆಗಳು ಸಾರ್ವಜನಿಕ ನಂಬಿಕೆಯನ್ನು ಕಳೆದುಕೊಂಡಿವೆ. ಹೀಗಾಗಿ ಬಳ್ಳಾರಿ ಗಲಭೆ ಪ್ರಕರಣದ ತನಿಖೆಯನ್ನು ಸಿಬಿಐ ತನಿಖೆಗೆ ವಹಿಸಬೇಕೆಂದು ಆಗ್ರಹಿಸಿದರು.**

ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮತ್ತು ಗೃಹ ಸಚಿವ ಜಿ.ಪರಮೇಶ್ವರ್ ಅವರು ವಿರೋಧಾತ್ಮಕ ಹೇಳಿಕೆಗಳನ್ನು ನೀಡುತ್ತಿದ್ದಾರೆ ಮತ್ತು ನಿರ್ಣಾಯಕವಾಗಿ ಕಾರ್ಯನಿರ್ವಹಿಸಲು ವಿಫಲರಾಗಿದ್ದಾರೆ. ನನಗೆ ಲಭ್ಯವಿರುವ ಮಾಹಿತಿ ಪ್ರಕಾರ, ಕಾಂಗ್ರೆಸ್ ಕಾರ್ಯಕರ್ತ ರಾಜಶೇಖರ್ ಅವರ ದೇಹವನ್ನು ಎರಡು ಬಾರಿ ಮರಣೋತ್ತರ ಪರೀಕ್ಷೆಗೆ ಒಳಪಡಿಸಲಾಗಿದೆ ಎಂದು ಹೇಳಿದರು.

ಗುಂಡಿನ ಚಕಮಕಿಯ ಸುತ್ತಲಿನ ನಿರೂಪಣೆಯನ್ನು ಬದಲಾಯಿಸುವ ಪ್ರಯತ್ನದ ಭಾಗವಾಗಿ ಎರಡನೇ ಮರಣೋತ್ತರ ಪರೀಕ್ಷೆಯನ್ನು ನಡೆಸಲಾಗಿದೆ. ಎರಡನೇ ಮರಣೋತ್ತರ ಪರೀಕ್ಷೆಯ ಅಗತ್ಯವೇನಿತ್ತು, ಮೊದಲ ಮರಣೋತ್ತರ ಪರೀಕ್ಷೆ ವರದಿಯ ಆವಿಷ್ಕಾರಗಳೇನು, ಎರಡನೇ ಮರಣೋತ್ತರ ಪರೀಕ್ಷೆ ವರದಿ ಏನು ಹೇಳುತ್ತದೆ, ಎರಡನೇ ಮರಣೋತ್ತರ ಪರೀಕ್ಷೆಯನ್ನು ಏಕೆ ನಡೆಸಲಾಯಿತು ಮತ್ತು ಅದಕ್ಕೆ ಯಾರು ಒತ್ತಡ ಹೇರಿದರು. ಬಿಜೆಪಿ ಶಾಸಕ ಜನಾರ್ಧನ ರೆಡ್ಡಿ ಅವರ ಮೇಲೆ ತಪ್ಪಾಗಿ ಹೊಣೆಗಾರಿಕೆಯನ್ನು ಹೊರಿಸಲು ಎರಡನೇ ಮರಣೋತ್ತರ ಪರೀಕ್ಷೆಯನ್ನು ಬಳಸಲಾಗಿದೆ ಎಂದು ಆರೋಪಿಸಿದರು.

ಇದೇ ವೇಳೆ ಅಧಿಕಾರಿಗಳ ಅಮಾನತು ಪ್ರಶ್ನಿಸಿದ ಅವರು, ಎಸ್‌ಪಿಯಿಂದ ತಪ್ಪಾಗಿದ್ದರೆ, ಹೆಚ್ಚುವರಿ ಎಸ್‌ಪಿ ಮತ್ತು ಐಜಿ ಕೂಡ ಜವಾಬ್ದಾರರಲ್ಲವೇ. ಪ್ರಕರಣದ ನಿರ್ವಹಣೆಯಲ್ಲಿ ರಾಜಕೀಯ ಪಕ್ಷಪಾತವಿದೆ. ಬಳ್ಳಾರಿ ಶಾಸಕ ನಾ.ರಾ.ಭರತ್ ರೆಡ್ಡಿ ಅವರ ಆಪ್ತ ಸಹಚರ ಸೇರಿ ಆರೋಪಿಗಳನ್ನು ಸರ್ಕಾರ ರಕ್ಷಿಸಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಸಂಪೂರ್ಣವಾಗಿ ಕುಸಿದಿದೆ ಎಂದು ಆರೋಪಿಸಿದರು.

ನಿಜವಾದ ಹೊಣೆಗಾರರು ಯಾರು ತಿಳಿಸಿ ಗಲಭೆ ಪ್ರಕರಣದಲ್ಲಿ ಬಳ್ಳಾರಿ ಎಸ್‌ಪಿಯನ್ನು ಮಾತ್ರ ಅಮಾನತು ಮಾಡಲಾಗಿದೆ. ಐಜಿ, ಎಎಸ್ಪಿ, ಡಿವೈಎಸ್‌ಪಿ ಅವರಿಗೆ ಬಳ್ಳಾರಿಯ ಹಿನ್ನಲೆ ಗೊತ್ತಿರಲಿಲ್ಲವೇ. ಅವರನ್ನು ಏಕೆ ಅಮಾನತು ಮಾಡಿಲ್ಲವೆಂದು ಪ್ರಶ್ನಿಸಿದ ಅವರು, ಯಾವ ಅಧಿಕಾರಿಗಳು ನಿಜವಾದ ಹೊಣೆಗಾರರು ಎಂಬುದನ್ನು ಸರ್ಕಾರ ಜನರ ಮುಂದೆ ಇಡಬೇಕು. ಜನಾರ್ಧನ ರೆಡ್ಡಿಗೆ ಬಳ್ಳಾರಿಗೆ ಪ್ರವೇಶಕ್ಕೆ ಅನುಮತಿ ನೀಡಿದ ಬಳಿಕ ಎಷ್ಟು ಗಲಭೆಗಳು ನಡೆದಿವೆ ಎಂಬ ವಿವರಗಳನ್ನು ಸರ್ಕಾರ ಬಹಿರಂಗಪಡಿಸಬೇಕು. ಜ.3 ರಂದು ನಡೆದ ಕಾರ್ಯಕ್ರಮಕ್ಕೆ ಸರ್ಕಾರ ಅನುಮತಿ ನೀಡಿತ್ತೇ ಅನುಮತಿ ಇಲ್ಲದಿದ್ದರೆ ಯಾವ ಅಧಿಕಾರದ ಆಧಾರದ ಮೇಲೆ ಕಾರ್ಯಕ್ರಮ ನಡೆಸಲಾಯಿತು ಎಂದು ಅವರು ಪ್ರಶ್ನಿಸಿದರು.

## ತಂಬಾಕು ಬೆಳೆಗಾರರ ಹಿತ ಕಾಪಾಡಲು ಮನವಿ



• ಪ್ರಜೋದಯ ವರದಿ

**ಹಾಸನ:** ಹೊರ ರಾಜ್ಯಗಳಿಂದ ಸಿಗರೇಟ್ ಹಾಗು ತಂಬಾಕು ಪದಾರ್ಥ ಖರೀದಿ ಮಾಡುವುದನ್ನು ನಿಲ್ಲಿಸಿ ರಾಜ್ಯ ತಂಬಾಕು ಬೆಳೆಗಾರರ ಹಿತಾಸಕ್ತಿ ಕಾಪಾಡಬೇಕೆಂದು ಆಗ್ರಹಿಸಿ ರಾಜ್ಯ ರೈತ ಸಂಘದ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಸೋಮವಾರ ಪ್ರತಿಭಟನೆ ನಡೆಸಲಾಯಿತು.

ಸಂಘದ ತಾಲ್ಲೂಕು ಅಧ್ಯಕ್ಷ ಪ್ರಕಾಶ್ ಅವರು ಮಾತನಾಡಿ, 2025-26ನೇ ಸಾಲಿನಲ್ಲಿ ತಂಬಾಕು ಮಂಡಳಿ ಗರಿಷ್ಠ 100 ಮಿಲಿಯನ್ ಕೆ.ಜಿ. ತಂಬಾಕು ಬೆಳೆಗೆ ಅನುಮತಿ ನೀಡಿದ್ದರೂ ಮೇ, ಜುಲೈನಲ್ಲಿ ಸುರಿದ ನಿರಂತರ ಮಳೆಯಿಂದ ಉತ್ಪಾದನೆ ಕುಂಠಿತಗೊಂಡು ಕೇವಲ 80-85 ಮಿಲಿಯನ್ ಕೆ.ಜಿ.ಗೆ ಇಳಿಕೆಯಾಗಿದೆ. ರಾಜ್ಯದ ಬಹುತೇಕ ತಂಬಾಕು ಬೆಳೆಗಾರರು ಸಣ್ಣ ಮತ್ತು ಮಧ್ಯಮ ವರ್ಗದವರಾಗಿದ್ದು, ಮಂಡಳಿಯ ಎಲ್ಲಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುತ್ತಿದ್ದಾರೆ. ಆಂಧ್ರ ಪ್ರದೇಶದಲ್ಲಿ ನಿಗದಿತ ಮಿತಿಗಿಂತ ಹೆಚ್ಚಾಗಿ ತಂಬಾಕು ಉತ್ಪಾದನೆ ಆಗುತ್ತಿರುವುದರಿಂದ ಕರ್ನಾಟಕದ ಹರಾಜು ಮಾರುಕಟ್ಟೆಯ ಮೇಲೆ ಪ್ರತಿಕೂಲ ಪರಿಣಾಮ ಬೀರುತ್ತಿದೆ. ಖರೀದಿ ಕಂಪನಿಗಳು ಇಲ್ಲಿನ ತಂಬಾಕಿಗೆ ಆಸಕ್ತಿ ತೋರಿಸುತ್ತಿಲ್ಲವೆಂದು ಆರೋಪಿಸಿದರು. ಹೆಚ್ಚುವರಿ ಉತ್ಪಾದನೆಗೆ ವಿಧಿಸಿದ್ದ ದಂಡವನ್ನು ಕೇಂದ್ರ ಸರ್ಕಾರ ರದ್ದು

» ನಾಲ್ಕನೇ ಪುಟದಲ್ಲಿ

## ಬ್ಯಾಂಕ್ ಕಿರುಕುಳ ವಿರೋಧಿಸಿ ರೈತ ಸಂಘ ಪ್ರತಿಭಟನೆ

• ಪ್ರಜೋದಯ ವರದಿ

**ಹಾಸನ:** ರೈತರಿಗೆ ಸಾಲ ನೀಡಿದ ಬ್ಯಾಂಕ್‌ಗಳು ಸರ್ಫೆಸಿ ಕಾಯ್ದೆ ಹೆಸರಿನಡಿ ಜಮೀನು ಹರಾಜು ಪ್ರಕ್ರಿಯೆಗೆ ಮುಂದಾಗಿದ್ದು, ಸರ್ಕಾರ ಕೂಡಲೇ ಈ ಪ್ರಕ್ರಿಯೆಯನ್ನು ನಿಲ್ಲಿಸಬೇಕೆಂದು ರೈತ ಸಂಘದ ರಾಜ್ಯಾಧ್ಯಕ್ಷ ಕೋಡಿಹಳ್ಳಿ ಚಂದ್ರಶೇಖರ್ ಅವರು ಆಗ್ರಹಿಸಿದರು.

ನಗರದಲ್ಲಿ ಸೋಮವಾರ ಸುದ್ದಿಗೋಷ್ಠಿ ಬಳಿಕ ಜಿಲ್ಲಾಧಿಕಾರಿ ಕಚೇರಿ ಎದುರು ಹಮ್ಮಿಕೊಂಡಿದ್ದ ಪ್ರತಿಭಟನೆಯಲ್ಲಿ ಮಾತನಾಡಿದ ಅವರು, ಬೇಲೂರು ತಾಲ್ಲೂಕು ಅರೇಹಳ್ಳಿಯ ಅಕಿಲಾ ಬಾನು ಎಂಬುವವರು 2016ರಲ್ಲಿ ಅರೇಹಳ್ಳಿ ಕೆನರಾ ಬ್ಯಾಂಕ್‌ನಲ್ಲಿ 3.20 ಲಕ್ಷ ರೂ. ಕೃಷಿ ಸಾಲ ಪಡೆದಿದ್ದಾರೆ. 2018ರಲ್ಲಿ ಮುಖ್ಯಮಂತ್ರಿಯಾಗಿದ್ದ ಹೆಚ್.ಡಿ.ಕುಮಾರಸ್ವಾಮಿ ಅವರು ರೈತರ ಸಾಲ ಮನ್ನಾ ಮಾಡಿದ್ದರು. ಅದೇ ಭರವಸೆಯಿಂದ ಋಣಮುಕ್ತರಾಗಿದ್ದೇವೆಂದು ಅಕಿಲಾ ಬಾನು ಇದ್ದರು. ಆದರೆ, ಇತ್ತೀಚೆಗೆ ಬ್ಯಾಂಕ್‌ನವರು ಅಸಲು, ಬಡ್ಡಿ ಸೇರಿ 6 ಲ.ರೂ. ಪಾವತಿಸಬೇಕೆಂದು ನೋಟೀಸ್ ಜಾರಿ ಮಾಡಿದ್ದಾರೆ. 60 ದಿನಗಳೊಳಗೆ ಹಣ ಕಟ್ಟದಿದ್ದರೆ ಸರ್ಫೆಸಿ ಕಾಯ್ದೆಯಡಿ ಆನ್‌ಲೈನ್ ಮೂಲಕ ಜಮೀನು ಹರಾಜು ಹಾಕುವ ಎಚ್ಚರಿಕೆ ನೀಡಿದ್ದಾರೆ. ಕಾಡಾನೆ ಹಾವಳಿಯಿಂದ ನಿರೀಕ್ಷಿತ ಬೆಳೆ ಪಡೆಯಲು ಸಾಧ್ಯವಾಗದ ರೈತರಿಗೆ ಬಡ್ಡಿಯಾದರೂ ಮನ್ನಾ ಮಾಡಿದರೆ ಅಸಲು ಮಾತ್ರ ಪಾವತಿಸಬಹುದು. ಬ್ಯಾಂಕ್‌ನವರು ಅದಕ್ಕೆ ಅವಕಾಶ ಕಲ್ಪಿಸುತ್ತಿಲ್ಲವೆಂದು ಆಕ್ರೋಶ ವ್ಯಕ್ತಪಡಿಸಿದರು.



1980ರ ಅವಧಿಯಲ್ಲಿ ಜಾರಿಗೆ ಬಂದ ಸರ್ಫೆಸಿ ಕಾಯ್ದೆ ರೈತರ ಪಾಲಿಗೆ ಮರಣ ಶಾಸನವಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೂಡಲೇ ಸುಗ್ರೀವಾಜ್ಞೆ ಹೊರಡಿಸಿ ಈ ರೀತಿಯ ಪ್ರಕ್ರಿಯೆಗಳಿಗೆ ಕಡಿವಾಣ ಹಾಕಬೇಕು. ಇಲ್ಲವಾದರೆ ರಾಜ್ಯಾದ್ಯಂತ ಹೋರಾಟ ನಡೆಸಬೇಕಾಗುತ್ತದೆಂದು ಎಚ್ಚರಿಕೆ ನೀಡಿದರು.

**ಶಿಲುಬೆ ಬೆಟ್ಟದಲ್ಲಿ ಗಣಿಗಾರಿಕೆ ಬೇಡ**

ಆಲೂರು ತಾಲ್ಲೂಕಿನ ಶಿಲುಬೆ ಬೆಟ್ಟದ ಸರ್ವೆ ನಂ. 151ರಲ್ಲಿ ಗಣಿಗಾರಿಕೆಯಿಂದ ಸುತ್ತಲಿನ ಕೃಷಿ ಜಮೀನಿನ ಮೇಲೆ ವ್ಯತಿರಿಕ್ತ ಪರಿಣಾಮ ಬೀರುತ್ತಿದ್ದು ಅದಕ್ಕೆ ಅವಕಾಶ ಮಾಡಿಕೊಡಬಾರದೆಂದು ಒತ್ತಾಯಿಸಿದ ಅವರು, ಬ್ಲಾಸ್ಟಿಂಗ್ ಮಾಡುವುದರಿಂದ ಗ್ರಾಮದ ರಸ್ತೆಗಳು ಹಾಳಾಗಿವೆ. ಶಾಲಾ, ಕಾಲೇಜು ಮಕ್ಕಳ ಸಂಚಾರಕ್ಕೆ ಭಾರೀ ತೊಂದರೆಯಾಗುತ್ತಿದೆ.

» ನಾಲ್ಕನೇ ಪುಟದಲ್ಲಿ

## ಕಾನೂನಿನ ಅರಿವು ಎಲ್ಲರಿಗೂ ಅತ್ಯವಶ್ಯ : ಹೇಮಾವತಿ

### ಜಿಲ್ಲಾಧಿಕಾರಿ ಕಚೇರಿಯಲ್ಲಿ ಉಚಿತ ಕಾನೂನು ಸಲಹಾ ಕೇಂದ್ರ ಉದ್ಘಾಟನೆ

• ಪ್ರಜೋದಯ ವರದಿ

**ಹಾಸನ:** ಸಮಾಜದ ಎಲ್ಲರಿಗೂ ಕಾನೂನಿನ ಅರಿವಿರಬೇಕು. ಕಟ್ಟಕಡೆಯ ವ್ಯಕ್ತಿಗೂ ಸಂವಿಧಾನ ಕಲ್ಪಿಸಿರುವ ಹಕ್ಕುಗಳು ದೊರೆಯುವಂತಾಗಬೇಕೆನ್ನುವುದು ಕಾನೂನು ಸೇವಾ ಪ್ರಾಧಿಕಾರದ ಉದ್ದೇಶವೆಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಅಧ್ಯಕ್ಷೆ ಹೇಮಾವತಿ ಅವರು ಹೇಳಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಸೋಮವಾರ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಜಿಲ್ಲಾಡಳಿತದಿಂದ ಆರಂಭಿಸಿರುವ ಉಚಿತ ಕಾನೂನು ಸಲಹಾ ಕೇಂದ್ರ ಉದ್ಘಾಟಿಸಿ ಮಾತನಾಡಿದ ಅವರು, ಸಾರ್ವಜನಿಕರಿಗೆ ಕಾನೂನು ನೆರವು ಎಲ್ಲಿ ಪಡೆಯಬೇಕೆಂಬ ಮಾಹಿತಿ ಇರುವುದಿಲ್ಲ. ವಕೀಲರ ಸಹಾಯ ಪಡೆಯಲು ಕೆಲವರ ಬಳಿ ಹಣ ಇರುವುದಿಲ್ಲ. ಹೀಗಾಗಿ ತಮ್ಮ ಹಕ್ಕುಗಳನ್ನು ರಕ್ಷಿಸಿಕೊಳ್ಳಲು ವಿಫಲರಾಗುತ್ತಾರೆ. ಸಾರ್ವಜನಿಕರ ಅನುಕೂಲಕ್ಕಾಗಿ ಉಚಿತ ಸಲಹಾ ಕೇಂದ್ರ ಸ್ಥಾಪಿಸಲಾಗಿದ್ದು, ಸಾರ್ವಜನಿಕರು ಸಲಹಾ ಕೇಂದ್ರದ ನೆರವು ಪಡೆದುಕೊಳ್ಳಬೇಕೆಂದರು.



ಜಿಲ್ಲಾ ನ್ಯಾಯಾಲಯದಲ್ಲಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಉಚ್ಚ ನ್ಯಾಯಾಲಯದಲ್ಲಿ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಹಾಗು ಸರ್ವೋಚ್ಚ ನ್ಯಾಯಾಲಯದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಕಾರ್ಯ ನಿರ್ವಹಿಸುತ್ತದೆ. ಕಾನೂನಿನ ಸಲಹೆ ಅವಶ್ಯಕತೆ ಇರುವವರು ಸದುಪಯೋಗ ಪಡೆದುಕೊಳ್ಳಬಹುದೆಂದು ತಿಳಿಸಿದರು.

ಕಂದಾಯ, ಪೊಲೀಸ್ ಇಲಾಖೆ ಹಾಗು ಆಸ್ಪತ್ರೆ ಸೇರಿ ಎಲ್ಲಿ ಜನರಿಗೆ ಕಾನೂನಿನ ಅವಶ್ಯಕತೆ ಇರುತ್ತದೆ ಅಂತಹ ಸ್ಥಳಗಳಲ್ಲಿ ರಕ್ಷಣೆ ಪಡೆಯಬೇಕೆಂಬ ಯೋಜನೆಯಿಂದ ಈ ಕೇಂದ್ರ ಸ್ಥಾಪಿಸಲಾಗಿದೆ. ನೆರವಿಗೆ ನಿವೃತ್ತ ವಕೀಲರನ್ನು ನೇಮಿಸಲಾಗಿದೆ. ಯಾರು ಸಹ ಹಣ ನೀಡುವಂತಿಲ್ಲ, ಇಲ್ಲಿ ಕೆಲಸ ಮಾಡುವವರಿಗೆ ಸರ್ಕಾರವೇ ಹಣ ನೀಡುತ್ತದೆ. ಉಚಿತ ಕಾನೂನು ಸಲಹೆ ಪ್ರಯೋಜನವನ್ನು ಪಡೆದುಕೊಳ್ಳುವ ಮೂಲಕ ಕಾನೂನು ತೊಡಕುಗಳನ್ನು ಪರಿಹರಿಸಿಕೊಳ್ಳಬೇಕೆಂದರು.

ಉಚಿತ ಕಾನೂನು ಸಲಹೆ ಕೇಂದ್ರದಲ್ಲಿ ತಿಮ್ಮಶೆಟ್ಟಿ ಎಂಬ ವಕೀಲರನ್ನು ನೇಮಿಸಲಾಗಿದೆ. ವಕೀಲರು ಹಣಕ್ಕೆ ಬೇಡಿಕೆ ಇಟ್ಟರೆ ನೇರವಾಗಿ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಕಚೇರಿಗೆ ಮಾಹಿತಿ ನೀಡಬೇಕೆಂದು ಸಲಹೆ ನೀಡಿದರು.

ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ ಅವರು ಮಾತನಾಡಿ, ಕಾನೂನು ಅರಿವು ಅವಶ್ಯಕತೆ ಇರುವ ಮಹಿಳೆಯರು ಮತ್ತು ಮಕ್ಕಳು ಪ್ರಯೋಜನ ಪಡೆದುಕೊಳ್ಳಬಹುದು. ಪರಿಶಿಷ್ಟ ಜಾತಿ, ಪಂಗಡದ ವರ್ಗದವರು, ಮಾನಸಿಕವಾಗಿ ನೊಂದವರು ಉಚಿತ ಕಾನೂನು ಸೇವೆಯನ್ನು ಪಡೆದುಕೊಳ್ಳಬಹುದೆಂದು ಹೇಳಿದರು.

ಉಚಿತವಾಗಿ ಕಾನೂನು ಸೇವೆಯನ್ನು ಪಡೆಯಲು 15100 ಸಂಖ್ಯೆಗೆ ಕರೆ ಮಾಡಿ ತಮಗೆ ಅವಶ್ಯಕತೆ ಇರುವ ಕಾನೂನು ನೆರವು ಹಾಗು ಕಾನೂನು ಕೇಂದ್ರದ ವಿವರ ಪಡೆಯಬಹುದು. ನೇರವಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿರುವ ಕಾನೂನು ಸಲಹಾ ಕೇಂದ್ರಕ್ಕೆ ಭೇಟಿ ನೀಡಿ ವಕೀಲರೊಂದಿಗೆ ಸಮಾಲೋಚಿಸಿ ಅಗತ್ಯ ಮಾಹಿತಿ ತಿಳಿದುಕೊಳ್ಳಬೇಕು. ಕಂದಾಯ ಮತ್ತು ವಿವಿಧ ಇಲಾಖಾ ಕೆಲಸ ಕಾರ್ಯಗಳಿಗೆ ಮತ್ತು ವಿವಿಧ ನ್ಯಾಯಾಲಯದ ಪ್ರಕರಣಗಳಿಗೆ ಸಂಬಂಧಿಸಿ ಉಚಿತವಾಗಿ ಕಾನೂನು ಸಲಹೆಯನ್ನು ಪಡೆದು ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶುಭನ್ವಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಜಿ.ಕೆ.ದಾಕ್ಷಾಯಿಣಿ, ಅಪರ ಜಿಲ್ಲಾಧಿಕಾರಿ ಜಗದೀಶ್ ಗಂಗಣ್ಣನವರ್, ಜಿಲ್ಲಾಧಿಕಾರಿ ಕಾನೂನು ಸಲಹೆಗಾರ ವೆಂಕಟೇಶ್ ಮತ್ತಿತರರಿದ್ದರು.

## ಮುದ್ರಣ ಮಾಧ್ಯಮ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ

### ತಾಲ್ಲೂಕು ಪತ್ರಕರ್ತರ ಸಂಘದ ಪದಾಧಿಕಾರಿಗಳ ಪದಗ್ರಹಣ | ಶಾಸಕ ಶಿವಲಿಂಗೇಗೌಡ ಅಭಿಮತ

• ಪ್ರಜೋದಯ ವರದಿ

**ಅರಸೀಕೆರೆ:** ಆಧುನಿಕತೆ ಬೆಳೆದಂತೆ ಮಾಧ್ಯಮ ರಂಗದಲ್ಲಿ ಸಾಕಷ್ಟು ಬದಲಾವಣೆಗಳಾಗುತ್ತಿದ್ದು, ಮುದ್ರಣ ಮಾಧ್ಯಮ ವಿಶ್ವಾಸಾರ್ಹತೆಯನ್ನು ಉಳಿಸಿಕೊಂಡಿದೆ ಎಂದು ಶಾಸಕ ಕೆ.ಎಂ.ಶಿವಲಿಂಗೇಗೌಡ ಅವರು ಹೇಳಿದರು.

ನಗರದಲ್ಲಿ ಸೋಮವಾರ ಏರ್ಪಡಿಸಿದ್ದ ತಾಲ್ಲೂಕು ಪತ್ರಕರ್ತರ ಸಂಘದ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಮಾತನಾಡಿದ ಅವರು, ಯಾರು ಎಷ್ಟೇ ಟೀಕೆ-ಟಿಪ್ಪಣಿ, ನಿಂದನೆ ಮಾಡಿದರೂ ನೈಜತೆ, ಸಿದ್ಧಾಂತವನ್ನು ಪ್ರಶ್ನಿಸಲು ಸಾಧ್ಯವಿಲ್ಲವೆಂದರು.

ಸಾರ್ವಜನಿಕ ಸೇವೆಯ ಉದ್ದೇಶದಿಂದ ಚುನಾವಣೆಗಳಲ್ಲಿ ಗೆಲ್ಲುವವರು ಸಂಘದ ಏಳಿಗೆಗೆ ಪ್ರಾಮಾಣಿಕವಾಗಿ ಶ್ರಮಿಸಬೇಕು. ಅಧಿಕಾರ ಪಡೆದವರು ತಮ್ಮ ಕ್ಷೇತ್ರದಲ್ಲಿ ಎಷ್ಟೇ ಸವಾಲು ಎದುರಾದರೂ ಎದೆಗುಂದದೆ ಮುನ್ನುಗ್ಗಿ ಕೆಲಸ ಮಾಡಬೇಕು. ನಮ್ಮ ಕೆಲಸಗಳಿಂದಲೇ ಆರೋಪಗಳಿಗೆ ಪ್ರತ್ಯುತ್ತರ ನೀಡಬೇಕೆಂದರು.



ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಪತ್ರಕರ್ತರ ಸಂಘಟನೆ ವಿಚಾರದಲ್ಲಿ ಮಹತ್ವದ ಕೆಲಸ ಮಾಡುತ್ತಿದ್ದಾರೆ. ಹಾಸನ, ಅರಸೀಕೆರೆಯಲ್ಲೂ ಅದೇ ಮಾದರಿ ಕೆಲಸಗಳಾಗಬೇಕು.

» ನಾಲ್ಕನೇ ಪುಟದಲ್ಲಿ

## ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ : ಅಸ್ಸಾಂ ಕಾರ್ಮಿಕನ ಬಂಧನ

• ಪ್ರಜೋದಯ ವರದಿ

**ಬೇಲೂರು:** ಅಸ್ಸಾಂ ಮೂಲದ ಕಾರ್ಮಿಕನೊಬ್ಬ ನಾಲ್ಕು ವರ್ಷದ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿರುವ ಅಮಾನವೀಯ ಘಟನೆ ಬೆಳಕಿಗೆ ಬಂದಿದೆ. ಅಸ್ಸಾಂ ರಾಜ್ಯದ ಗೌಹಾಟಿ ಮೂಲದ ಶಾಹಿದ್ ಅಲಿ (33) ಎಂಬಾತನನ್ನು ಪೊಲೀಸರು ಬಂಧಿಸಿದ್ದಾರೆ.

ಮೇಘಾಲಯ ರಾಜ್ಯದ ಕುಟುಂಬವೊಂದು ಎರಡು ವರ್ಷಗಳ ಹಿಂದೆ ತಾಲ್ಲೂಕಿನ ಕಾಫಿ ತೋಟದಲ್ಲಿ ಕೂಲಿ ಕೆಲಸ ಮಾಡಿಕೊಂಡಿತ್ತು. 2 ತಿಂಗಳ ಹಿಂದೆಯಷ್ಟೇ ಕೂಲಿಗಾಗಿ ಪಕ್ಕದ ಮನೆಗೆ ಬಂದ ಆರೋಪಿ ಶಾಹಿದ್ ಅಲಿ, ಜ.2ರಂದು ಮನೆಯಲ್ಲಿ ಯಾರು ಇಲ್ಲದ ವೇಳೆ ಲೈಂಗಿಕ ದೌರ್ಜನ್ಯ ಎಸಗಿದ್ದಾನೆಂದು ತಿಳಿದು ಬಂದಿದೆ.

ಈ ಸಂಬಂಧ ಪೋಷಕರು ದೂರು ಆಧರಿಸಿ ಅರೇಹಳ್ಳಿ ಠಾಣೆ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದು, ಪೋಕ್ಸೋ ಪ್ರಕರಣ ದಾಖಲಿಸಿ, ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

## ಫುಟ್‌ಪಾತ್ ಒತ್ತುವರಿ ತೆರವು : ಬೀದಿ ಬದಿ ವ್ಯಾಪಾರಿಗಳ ಆಕ್ರೋಶ

• ಪ್ರಜೋದಯ ವರದಿ

**ಆಲೂರು:** ಪಟ್ಟಣದ ಮುಖ್ಯ ರಸ್ತೆಯಲ್ಲಿ ಪಾದಚಾರಿಗಳ ಸುಗಮ ಸಂಚಾರ ಹಾಗು ಅಪಘಾತ ತಡೆ ಉದ್ದೇಶದಿಂದ ಪಟ್ಟಣ ಪಂಚಾಯಿತಿ ವತಿಯಿಂದ ಸೋಮವಾರ ಫುಟ್‌ಪಾತ್ ಒತ್ತುವರಿ ತೆರವು ಕಾರ್ಯಾಚರಣೆ ನಡೆಸಲಾಯಿತು.

ತಹಶೀಲ್ದಾರ್ ಮಲ್ಲಿಕಾರ್ಜುನ್ ಮತ್ತು ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಮಂಜುನಾಥ್ ಅವರ ನೇತೃತ್ವದಲ್ಲಿ ಪೊಲೀಸರ ಸಹಕಾರದೊಂದಿಗೆ ಫುಟ್‌ಪಾತ್ ಮೇಲೆ ಅತಿಕ್ರಮಿಸಿಕೊಂಡು ಹಾಕಿದ್ದ ಅಂಗಡಿ ಮುಂಗಟ್ಟುಗಳು, ಸರಕು-ಸಾಮಾಗ್ರಿಗಳನ್ನು ತೆರವುಗೊಳಿಸಲಾಯಿತು. ಈ ವೇಳೆ ಅಧಿಕಾರಿಗಳು ಮತ್ತು ವ್ಯಾಪಾರಸ್ಥರ ನಡುವೆ ಮಾತಿನ ವಾಗ್ವಾದ ನಡೆಯಿತು. ಪೊಲೀಸರ ಸಮ್ಮುಖದಲ್ಲಿ ಎಲ್ಲಾ ವಸ್ತುಗಳನ್ನು ತೆರವು ಮಾಡಲಾಯಿತು. ಈ ಕ್ರಮಕ್ಕೆ ಸಾರ್ವಜನಿಕರಿಂದ ಮೆಚ್ಚುಗೆ ವ್ಯಕ್ತ



**ಆರು ತಿಂಗಳ ಹಿಂದೆಯೇ ಬೀದಿಬದಿ ವ್ಯಾಪಾರಿಗಳ ಸಭೆ ಕರೆದು ಫುಟ್‌ಪಾತ್ ತೆರವುಗೊಳಿಸುವಂತೆ ಮನವಿ ಮಾಡಲಾಗಿತ್ತು. ನಂತರ ನಾಲ್ಕು ಬಾರಿ ನೋಟೀಸ್ ಕೂಡ ನೀಡಲಾಗಿದೆ. ಜಿಲ್ಲಾಧಿಕಾರಿಯವರ ನಿರ್ದೇಶನದಂತೆ ಸಾರ್ವಜನಿಕರ ಹಿತದೃಷ್ಟಿಯಿಂದ ಈ ಕ್ರಮ ಕೈಗೊಳ್ಳಲಾಗಿದೆ.**

**-ಮಂಜುನಾಥ್, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ**

» ನಾಲ್ಕನೇ ಪುಟದಲ್ಲಿ

## ಇಂದು-ನಾಳೆ ದಿಗಂಬರ ಜೈನ ಅರ್ಚಕ ಸಮ್ಮೇಳನ

• ಪ್ರಜೋದಯ ವರದಿ

**ಶ್ರವಣಬೆಳಗೊಳ :** ಶ್ರವಣಬೆಳಗೊಳದಲ್ಲಿ ಮಂಗಳವಾರ ಮತ್ತು ಬುಧವಾರ ಎರಡು ದಿನಗಳ ಕಾಲ 5ನೇ ದಕ್ಷಿಣ ಭಾರತ ದಿಗಂಬರ ಜೈನ ಅರ್ಚಕ ಸಮ್ಮೇಳನ ನಡೆಯಲಿದ್ದು, ಕಾನಜಿ ಯಾತ್ರಿಕಾಶ್ರಮ ಸಂಪೂರ್ಣ ಸಜ್ಜುಗೊಂಡಿದೆ.

ಕನಕಗಿರಿ ಜೈನಮಠದ ಸ್ವಸ್ತಿಶ್ರೀ ಭುವನಕೀರ್ತಿ ಭಟ್ಟಾರಕ ಸ್ವಾಮೀಜಿ, ಶಿವಮೊಗ್ಗದ ಹುಂಚ ಜೈನಮಠದ ಸ್ವಸ್ತಿಶ್ರೀ ಡಾ.ದೇವೇಂದ್ರಕೀರ್ತಿ ಭಟ್ಟಾರಕ ಸ್ವಾಮೀಜಿ, ಶ್ರವಣಬೆಳಗೊಳದ ಸ್ವಸ್ತಿಶ್ರೀ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಸ್ವಾಮೀಜಿ ಸಾನಿಧ್ಯ ವಹಿಸುವರು. ಶಾಸಕರು, ವಿವಿಧ ರಾಜ್ಯದ ಹಿರಿಯ ಅರ್ಚಕರು ಭಾಗವಹಿಸಲಿದ್ದಾರೆ.

ಜ.6ರಂದು ಬೆಳಿಗ್ಗೆ ಶ್ರವಣಬೆಳಗೊಳದ ದಿಗಂಬರ ಜೈನ ಸಮಾಜದ ಅಧ್ಯಕ್ಷ ಜೆ.ಪಿ.ಪದ್ಮಕುಮಾರ ಅವರಿಂದ ವಿಂಧ್ಯಗಿರಿ ಮಹಾದ್ವಾರ ಎದುರು ಮೆರವಣಿಗೆಗೆ ಚಾಲನೆ ದೊರೆಯಲಿದೆ. ಸಮ್ಮೇಳನದ ನಿಕಟ ಪೂರ್ವ ಅಧ್ಯಕ್ಷ ಪ್ರತಿಷ್ಠಾಚಾರ್ಯ ಶಾಂತಿನಾಥ ಉಪಾಧ್ಯ ಅವರಿಂದ ಧ್ವಜ ಹಸ್ತಾಂತರ ನಡೆಯಲಿದೆ. ಸಚಿವ ಡಿ.ಸುಧಾಕರ ಜೈನ್ ಸಮ್ಮೇಳನ ಉದ್ಘಾಟಿಸುವರು.

ಜ.7 ರಂದು 12.30ಕ್ಕೆ ಯಂತ್ರ-ಮಂತ್ರ-ತಂತ್ರ ಬಗ್ಗೆ ಶಾಂತಿನಾಥ ಉಪಾಧ್ಯೆ, ಪ್ರವೀಣ ಉಪಾಧ್ಯೆ, ದೀಪಕ್ ಉಪಾಧ್ಯೆ ಅವರು ಉಪನ್ಯಾಸ ನೀಡುವರು. ಸಂಜೆ 3ಗಂಟೆಗೆ ಜೈನ ಆಗಮದಲ್ಲಿ ಜಿನಶಾಸನ ದೇವತೆಗಳ ಪೂಜೆ ಉಪನ್ಯಾಸ ನಡೆಯಲಿದೆ. ಸಂಜೆ 4ಗಂಟೆಗೆ ಜೈನ ಪೌರೋಹಿತ್ಯ ಅಂದು-ಇಂದು- ಮುಂದು ಉಪನ್ಯಾಸ, ಸಂಜೆ 6.30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮ ಜರುಗಲಿದೆ.

### ಪ್ರಾರಂಭದಲ್ಲೇ ಕಡಿವಾಣ ಹಾಕದಿದ್ದರೆ ನೈಸರ್ಗಿಕ ಸಂಪತ್ತು ಲೂಟಿ |ಎಚ್ಚೆತ್ತುಕೊಳ್ಳಬೇಕಿದೆ ಜಿಲ್ಲಾಡಳಿತ

# ಹೇಮಾವತಿ ನದಿ ತಟದಲ್ಲಿ ಮರಳು ದಂಧೆ ಶುರು

• ಪ್ರಜೋದಯ ವರದಿ

**ಹಾಸನ:** ಹೇಮಾವತಿ ನದಿಯಲ್ಲಿ ನೀರು ನಿಧಾನಗತಿಯಲ್ಲಿ ಕಡಿಮೆಯಾಗುತ್ತಿದ್ದಂತೆ ಮರಳು ದಂಧೆ ಪ್ರಾರಂಭವಾಗಿದೆ. ಶುರುವಿನಲ್ಲೇ ದಂಧೆಗೆ ಕಡಿವಾಣ ಹಾಕದಿದ್ದರೆ ನೈಸರ್ಗಿಕ ಖನಿಜ ಸಂಪತ್ತು ಲೂಟಿಯಾಗಲಿದೆ.

ಇತ್ತೀಚೆಗಷ್ಟೇ ಸಕಲೇಶಪುರ ತಾಲ್ಲೂಕಿನ ಹಾಲೇ ಬೇಲೂರು ಬಳಿ ಅಕ್ರಮ ಮರಳು ಸಾಗಣೆ ಬಗ್ಗೆ ಸ್ಥಳೀಯರಿಂದ ನಿರಂತರವಾಗಿ ದೂರುಗಳು ಬರುತ್ತಿದ್ದ ಹಿನ್ನಲೆ, ಖಚಿತ ಮಾಹಿತಿ ಮೇರೆಗೆ ತಹಶೀಲ್ದಾರ್ ಸುಪ್ರೀತಾ ನೇತೃತ್ವದಲ್ಲಿ ಅಧಿಕಾರಿಗಳ ತಂಡ ದಾಳಿ ನಡೆಸಿ ಎರಡು ಟಿಪ್ಪರ್ ಲಾರಿಯನ್ನು ವಶಪಡಿಸಿಕೊಂಡಿದೆ. ದಾಳಿ ವೇಳೆ ಪರವಾನಗಿ ಇಲ್ಲದೇ ಮರಳು ಸಾಗಿಸುತ್ತಿರುವುದು ದೃಢಪಟ್ಟಿದ್ದು, ಗಣಿ ಮತ್ತು ಖನಿಜಗಳ ಅಭಿವೃದ್ಧಿ ಹಾಗು ನಿಯಂತ್ರಣ ಕಾಯ್ದೆ ಅಡಿ ಪ್ರಕರಣ ದಾಖಲಾಗಿದೆ.



ಇದೇ ರೀತಿ ಸಕಲೇಶಪುರ ತಾಲ್ಲೂಕಿನ ಮಳಲಿ, ಬೈಕೆರೆ, ಸುಳಗಳಲೆ, ನಾರ್ವೆ ಹೊಸಳ್ಳಿ, ಹಾಲೇ ಬೇಲೂರು, ರಾಮೇನಹಳ್ಳಿ, ಕೌಡಹಳ್ಳಿ, ಮಳಲಿ, ಕೊಣನೂರು, ವಡೂರು, ಕಿತ್ತಗಳಲೆ, ಮಾಗಲು, ಕೆರೋಡಿ, ಬೇಲೂರು, ಆಲೂರು ತಾಲ್ಲೂಕಿನ ನಾನಾ ಭಾಗಗಳಲ್ಲಿ ಮರಳನ್ನು ತೆಗೆದು ಹೆಚ್ಚಾಗಿ ಪಿಕಪ್ ವಾಹನಗಳಲ್ಲಿ ಸಾಗಿಸಲಾಗುತ್ತದೆ.

ರಾತ್ರಿಯಾಗುತ್ತಿದ್ದಂತೆ ಹೇಮಾವತಿ ನದಿ ಪಾತ್ರದಲ್ಲಿ ಅಕ್ರಮ ಮರಳುಗಾರಿಕೆ ಚಟುವಟಿಕೆಗಳು ಪ್ರಾರಂಭವಾಗುತ್ತವೆ. ನದಿ ದಡದಿಂದ ಪಿಕಪ್ ವಾಹನ ಅಥವಾ ಟ್ರ್ಯಾಕ್ಟರ್‌ನಲ್ಲಿ ತಂದು, ಅಲ್ಲಿಂದ ಟಿಪ್ಪರ್ ಲಾರಿಗಳಲ್ಲಿ ರಾತ್ರೋರಾತ್ರಿ ಜಿಲ್ಲೆಯ ಹಲವು ಭಾಗಗಳಿಗೆ ಸಾಗಿಸಲಾಗುತ್ತದೆ. ಹೇಮಾವತಿ ನದಿ ಮಾತ್ರವಲ್ಲದೇ ಅದರ ಉಪನದಿಗಳಲ್ಲೂ ಅಕ್ರಮ ಮರಳು ಗಣಿಗಾರಿಕೆ ಪ್ರಾರಂಭವಾಗಿದೆ. ಸಣ್ಣ-ಪುಟ್ಟ ಹಳ್ಳಗಳಲ್ಲಿ ಮರಳು ತೆಗೆದು ಸಾಗಣೆ ಮಾಡಲಾಗುತ್ತಿದೆ. ಇಡೀ ರಾತ್ರಿ ಲಾರಿ, ಟ್ರ್ಯಾಕ್ಟರ್, ಪಿಕಪ್ ವಾಹನಗಳು ಓಡಾಡುವುದರಿಂದ ಸ್ಥಳೀಯರಿಗೆ ನೆಮ್ಮದಿ ಇಲ್ಲದಂತಾಗಿದೆ. ರಸ್ತೆಗಳು ಹದಗೆಟ್ಟು, ಧೂಳು ಮಯವಾಗಿವೆ.

**ಕಣ್ಮುಚ್ಚಿ ಕುಳಿತ ಪೊಲೀಸರು**

ಈ ಬಾರಿ ಮಳೆ ಹೆಚ್ಚಿದ್ದ ಕಾರಣ ಹೇಮಾವತಿ ನದಿಯಲ್ಲಿ ನೀರಿನ ಪ್ರಮಾಣ ಕಡಿಮೆಯಾಗಿಲ್ಲ. ಆದರೂ ಸಕಲೇಶಪುರ ತಾಲ್ಲೂಕಿನ ಹಲವು ಕಡೆಗಳಲ್ಲಿ ಅಕ್ರಮ ಮರಳು ಸಾಗಣೆ ಹೆಗ್ಗಿಲ್ಲದೆ ನಡೆಯುತ್ತಿದೆ. ಮರಳು ಸಾಗಣೆಗಾಗಿ ದಂಧೆಕೋರರೇ ಜೆಸಿಬಿ ಯಂತ್ರಗಳ ಮೂಲಕ ಹದಗೆಟ್ಟ ರಸ್ತೆಯನ್ನು ರಿಪೇರಿ ಮಾಡಿಕೊಂಡು ನಿತ್ಯ ಪಿಕಪ್ ವಾಹನಗಳಲ್ಲಿ ಮರಳು

» ನಾಲ್ಕನೇ ಪುಟದಲ್ಲಿ

**ಜಿಲ್ಲೆಯಲ್ಲಿ ಜಾರಿಗೆ ಬಾರದ ಮರಳು ನೀತಿ**

**ರಾಜ್ಯದಲ್ಲಿ ಹೊಸ ಮರಳು ನೀತಿ ಜಾರಿಗೊಳಿಸಿ ಪ್ರತಿ ಟನ್ ಮರಳಿಗೆ 850ರೂ. ಏಕರೂಪದ ದರ ನಿಗದಿಪಡಿಸಿ ಆದೇಶ ಹೊರಡಿಸಿದ ಬೆನ್ನಲ್ಲೆ ಕಳೆದ ವರ್ಷವೇ ಜಿಲ್ಲೆಯಲ್ಲಿ 25 ಬ್ಲಾಕ್‌ಗಳನ್ನು ಗುರುತಿಸಲಾಗಿತ್ತು. ಈ ಹಿಂದೆ ಜಿಲ್ಲಾಧಿಕಾರಿ ಅಧ್ಯಕ್ಷತೆಯ ಮರಳು ಉಸ್ತುವಾರಿ ಸಮಿತಿ ಸಭೆಯಲ್ಲಿ ಗುರುತಿಸಿರುವ ಮರಳು ಬ್ಲಾಕ್‌ಗಳಿಗೆ ತೆರಳಲು ಸಂಪರ್ಕ ರಸ್ತೆ, ಮ್ಯಾಪಿಂಗ್, ಇತ್ಯಾದಿ ಅಂಶಗಳನ್ನು ಗಣಿ ಮತ್ತು ಭೂವಿಜ್ಞಾನ ಇಲಾಖೆ, ಕಂದಾಯ, ಲೋಕೋಪಯೋಗಿ, ನೀರಾವರಿ, ಪರಿಸರ ಇಲಾಖೆ ಜಂಟಿಯಾಗಿ ಪರಿಶೀಲನೆ ಮಾಡಿ, ಟೆಂಡರ್ ಪ್ರಕ್ರಿಯೆ ನಡೆಸಿ, ಮರಳು ವಿತರಣೆಗೆ ಕ್ರಮ ವಹಿಸಬೇಕಿದೆ. ಆ ಕೆಲಸ ಇನ್ನೂ ಪ್ರಾರಂಭವಾಗದ ಹಿನ್ನಲೆ ಅಕ್ರಮ ಮರಳು ದಂಧೆ ಆರಂಭಗೊಂಡಿದೆ.**

**ಅಕ್ರಮ ಮರಳು ಗಣಿಗಾರಿಕೆ ಹಾಗು ಸಾಗಣೆಯಿಂದ ಪರಿಸರದ ಹಾನಿಯ ಜೊತೆಗೆ ಸರ್ಕಾರಕ್ಕೆ ರಾಜಸ್ವ ನಷ್ಟ ಉಂಟಾಗುತ್ತಿದೆ. ಇಂತಹ ಕೃತ್ಯಗಳ ವಿರುದ್ಧ ಯಾವುದೇ ರೀತಿಯ ಸಡಿಲಿಕೆ ನೀಡಲಾಗುವುದಿಲ್ಲ. ತಾಲ್ಲೂಕಿನಲ್ಲಿ ಅಕ್ರಮ ಮರಳು ಗಣಿಗಾರಿಕೆ ಹಾಗು ಸಾಗಣೆ ವಿರುದ್ಧ ಕಟ್ಟುನಿಟ್ಟಿನ ಕ್ರಮ ಮುಂದುವರಿಯಲಿದೆ. ಸಾರ್ವಜನಿಕರು ಅಕ್ರಮ ಚಟುವಟಿಕೆಗಳ ಬಗ್ಗೆ ಮಾಹಿತಿ ನೀಡುವ ಮೂಲಕ ಆಡಳಿತಕ್ಕೆ ಸಹಕರಿಸಬೇಕು.**

**-ಸುಪ್ರೀತಾ, ತಹಶೀಲ್ದಾರ್**

## ದರೋಡೆ ಆರೋಪಿಗಳಿಗೆ 14 ವರ್ಷದ ಬಳಿಕ ಶಿಕ್ಷೆ

• ಪ್ರಜೋದಯ ವರದಿ

**ಅರಕಲಗೂಡು:** ಹದಿನಾಲ್ಕು ವರ್ಷಗಳ ಹಿಂದೆ ನಡೆದಿದ್ದ ದರೋಡೆ ಪ್ರಕರಣದ ಆರೋಪಿಗಳಿಗೆ ಇಲ್ಲಿನ 1ನೇ ಹೆಚ್ಚುವರಿ ನ್ಯಾಯಾಲಯ ಕಠಿಣ ಸಜೆ ಮತ್ತು ದಂಡ ವಿಧಿಸಿದೆ.

ಮಂಡ್ಯದ ತಿಮ್ಮಯ್ಯ, ರಾಮನಗರ ಜಿಲ್ಲೆ ಮಾಗಡಿ ತಾಲ್ಲೂಕು ಅಕ್ಕೂರು ಗ್ರಾಮದ ರಾಮಯ್ಯ, ದೊಡ್ಡಮಗ್ಗೆ ಹೋಬಳಿ ಇಬ್ಬಡಿ ಗ್ರಾಮದ ಪುಟ್ಟರಾಜ ಹಾಗು ಸತೀಶ ಅಪರಾಧಿಗಳು. 2012ರ ಮೇ ತಿಂಗಳಿನಲ್ಲಿ ಕೊಣನೂರು ಪೊಲೀಸ್ ಠಾಣೆ ವ್ಯಾಪ್ತಿಯ ಕೊರಟಿಕೆರೆ ಗ್ರಾಮದ ಒಂಟಿ ಮನೆಯ ಬಾಗಿಲು ಒಡೆದು ಮನೆಯಲ್ಲಿದ್ದ ಮಹಿಳೆ ಮತ್ತು ಮಕ್ಕಳ ಮೇಲೆ ಹಲ್ಲೆ ನಡೆಸಿ ಚಿನ್ನದ ಒಡವೆ, ಹಣ ಬಟ್ಟೆ, ಮೊಬೈಲ್‌ಗಳನ್ನು ದೋಚಿ ಪರಾರಿಯಾಗಿದ್ದರು.

ಪೊಲೀಸರು ಆರೋಪಿಗಳನ್ನು ಬಂಧಿಸಿ ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿದ್ದರು. ಪ್ರಕರಣದ ವಿಚಾರಣೆ ನಡೆಸಿದ 1ನೇ ಹೆಚ್ಚುವರಿ ನ್ಯಾಯಾಲಯದ ನ್ಯಾಯಾಧೀಶ ಎಂ.ರಘು ಅವರು, ಪುಟ್ಟರಾಜು ಮತ್ತು ಸತೀಶ್‌ಗೆ 5 ವರ್ಷ 6 ತಿಂಗಳು ಕಾರಾಗೃಹವಾಸ ಮತ್ತು 13 ಸಾವಿರ ರೂ. ದಂಡ ವಿಧಿಸಿ ಆದೇಶಿಸಿದ್ದಾರೆ. ತಿಮ್ಮಯ್ಯ ಎಂಬಾತ ಮೃತಪಟ್ಟಿದ್ದು, ಮತ್ತೊಬ್ಬ ಆರೋಪಿ ರಾಮಯ್ಯ ಕಾರಾಗೃಹದಲ್ಲಿದ್ದಾನೆ. ಉಳಿದ ಅಪರಾಧಿಗಳಿಗೆ ಶಿಕ್ಷೆ ಪ್ರಕಟಿಸಲಾಗಿದೆ. ಸರ್ಕಾರದ ಪರವಾಗಿ ಬಿ.ಬಿ.ಶಿವಪ್ಪ ವಾದ ಮಂಡಿಸಿದ್ದರು.

CMYK CMYK CMYK CMYK

# ಬ್ಯಾಂಕ್ ಕಿರುಕುಳ ವಿರೋಧಿಸಿ ರೈತ ಸಂಘ ಪ್ರತಿಭಟನೆ

» **ಮೊದಲನೇ ಪುಟದಿಂದ**

ಮನೆಗಳು ಬಿರುಕು ಬಿಡುತ್ತಿದ್ದು, ಜಾನುವಾರುಗಳಿಗೂ ತೊಂದರೆಯಾಗುತ್ತಿದೆ. ಈ ಬಗ್ಗೆ ಜಿಲ್ಲಾಡಳಿತ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು.

ಬೆಂಬಲ ಬೆಲೆಯಡಿ ಮೆಕ್ಕೆಜೋಳ ಖರೀದಿಸಬೇಕೆಂದು ಸರ್ಕಾರ ಆದೇಶಿಸಿದ್ದರೂ ಕೆಎಂಎಫ್ ನಿರ್ಲಕ್ಷ್ಯ ವಹಿಸುತ್ತಿದೆ. ಮಾರುಕಟ್ಟೆಯಲ್ಲಿ ಪ್ರತಿ ಕ್ವಿಂಟಾಲ್‌ಗೆ 1,700 ರೂ. ದೊರೆಯುತ್ತಿದೆ. 2,400 ರೂ.ನಂತೆ ಖರೀದಿಸುವಂತೆ ರಾಜ್ಯ ಸರ್ಕಾರ ಡಿ.7ರಂದು ಆದೇಶಿಸಿದೆ. ಈ ಬಗ್ಗೆ ಎಷ್ಟೇ ಹೇಳಿದರೂ ಪಶು ಆಹಾರ ಘಟಕದ ಅಧಿಕಾರಿಗಳು ಗಮನ ಹರಿಸುತ್ತಿಲ್ಲ. ಜಿಲ್ಲಾಡಳಿತ ಈ ಸಮಸ್ಯೆಗೆ ಪರಿಹಾರ ಕಲ್ಪಿಸಬೇಕು. ಆಲೂರು ತಾಲ್ಲೂಕು ಕೆ.ಹೊಸಕೋಟೆ ಹೋಬಳಿ ಕಾಡ್ಲೂರು ಗ್ರಾಮದ ಸರ್ವೆ ನಂ.4ರಲ್ಲಿ ಹೇಮಾವತಿ ಜಲಾಶಯ ಯೋಜನೆಯ ಮುಳುಗಡೆ ಸಂತ್ರಸ್ತರಿಗೆ ಪುನರ್ವಸತಿ ಅಡಿಯಲ್ಲಿ ಭೂಮಿ ಮಂಜೂರು ಮಾಡಬೇಕೆಂದು ಆಗ್ರಹಿಸಿದರು.

ಮಲೆನಾಡು ಭಾಗದಲ್ಲಿ ಹೆಚ್ಚಿರುವ ಕಾಡಾನೆಗಳಿಂದ ಬೆಳೆಗಾರರು ತೊಂದರೆ ಅನುಭವಿಸುತ್ತಿದ್ದಾರೆ. ರಾಜ್ಯ ಸರ್ಕಾರ ಕೂಡಲೇ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು. ಕಾಡಾನೆ ಉಪಟಳದಿಂದ ನಷ್ಟಕ್ಕೀಡಾಗಿರುವ ರೈತರಿಗೆ ಶೀಘ್ರ ಬೆಳೆ ಪರಿಹಾರ ಬಿಡುಗಡೆ ಮಾಡಬೇಕೆಂದು ಒತ್ತಾಯಿಸಿದರು. ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅವರಿಗೆ ಮನವಿ ಸಲ್ಲಿಸಲಾಯಿತು. ರೈತ ಸಂಘದ ಜಿಲ್ಲಾಧ್ಯಕ್ಷ ಬಾಬು, ರಾಜ್ಯ ಉಪಾಧ್ಯಕ್ಷ ಆನೆಕೆರೆ ರವಿ, ಅಕಿಲಾ ಬಾನು, ಮಹಮದ್ ಸಾದಿಕ್, ಮೆಹಬೂಬ್ ಪಾಷ, ಜಯರಾಮ್ ಬೋರನಕೊಪ್ಪಲು ಇದ್ದರು.

# ತಂಬಾಕು ಬೆಳೆಗಾರರ ಹಿತ ಕಾಪಾಡಲು ಮನವಿ

» **ಮೊದಲನೇ ಪುಟದಿಂದ**

ಪಡಿಸಿ ಕಡಿಮೆ ದಂಡ ವಿಧಿಸಿರುವುದು ಆಂಧ್ರಪ್ರದೇಶದ ಬೆಳೆಗಾರರಿಗೆ ವರದಾನವಾಗಿದೆ ಎಂದರು.

ಹೆಚ್ಚುವರಿ ತಂಬಾಕು ಉತ್ಪಾದನೆಗೆ ವಿಧಿಸುವ ದಂಡವನ್ನು ರದ್ದುಪಡಿಸಬಾರದು. ಪ್ರಸ್ತುತ ಹರಾಜಿನಲ್ಲಿ ವೈಜ್ಞಾನಿಕ ಹಾಗು ನ್ಯಾಯಸಮ್ಮತ ಬೆಲೆ ನಿಗದಿ ಮಾಡಬೇಕು. ಇಲ್ಲದಿದ್ದರೆ ಹೋರಾಟ ತೀವ್ರಗೊಳಿಸುವ ಎಚ್ಚರಿಕೆ ನೀಡಿದರು. ಪ್ರತಿಭಟನೆಯಲ್ಲಿ ರೈತ ಸಂಘದ ಜಿಲ್ಲಾಧ್ಯಕ್ಷ ರಘು, ದಶರಥ, ನರಸಿಂಹ ಶೆಟ್ಟಿ, ಸೋಮಶೇಖರ್, ನವೀನ್, ಆನಂದ್, ಶ್ರೀನಿವಾಸ್, ಶಿವಣ್ಣ, ಮಲ್ಲೇಶ್, ಕರೀಗೌಡ, ನಾಗೇಗೌಡ ಇತರರಿದ್ದರು.

# ಕೋಪ ಮನುಷ್ಯನ ಮೊದಲ ಶತ್ರು: ಕೋಡಿಶ್ರೀ

## ಕತ್ತರಿಘಟ್ಟ ಮೆಳಿಯಮ್ಮ ಆಧ್ಯಾತ್ಮಿಕ ಕೇಂದ್ರದಲ್ಲಿ ಮಹಾ ಚಂಡಿಕಾ ಯಾಗ

• ಪ್ರಜೋದಯ ವರದಿ



**ಚನ್ನರಾಯಪಟ್ಟಣ:** ಮನುಷ್ಯನು ಕೋಪದ ಕೈಗೆ ಬುದ್ಧಿ ಕೊಟ್ಟರೆ ಮಾನವೀಯತೆಯ ಮೌಲ್ಯ ಕಳೆದುಕೊಳ್ಳುತ್ತಾನೆ. ಜೊತೆಗೆ ಅದರಿಂದ ಅಪಾರ ನಷ್ಟವನ್ನೂ ಅನುಭವಿಸುತ್ತಾನೆಂದು ಸುಕ್ಷೇತ್ರ ಕೋಡಿಮಠದ ಶ್ರೀ ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಹೇಳಿದರು.

ತಾಲ್ಲೂಕಿನ ಕತ್ತರಿಘಟ್ಟದ ಶ್ರೀ ಮೆಳಿಯಮ್ಮ ಆಧ್ಯಾತ್ಮಿಕ ಕೇಂದ್ರದಲ್ಲಿ ಲೋಕ ಕಲ್ಯಾಣಾರ್ಥ ಹಮ್ಮಿಕೊಂಡಿದ್ದ 22ನೇ ಮಹಾ ಚಂಡಿಕಾ ಯಾಗ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದ ಅವರು, ಕೋಪ ಎಂಬುದೇ ಮನುಷ್ಯನ ಮೊದಲ ಶತ್ರು ಎಂದರು.

ಕೋಪಿಷ್ಟ ವ್ಯಕ್ತಿಗೆ ಎಂದಿಗೂ ಸುಖವಿಲ್ಲ. ಸಂಸಾರ ಸುಖಕರವಾಗಿರುವುದಿಲ್ಲ. ಸ್ನೇಹ ಹಾಗು ಬಾಂಧವ್ಯದ ಬಂಧನ ಅಳಿಸಿ ಹೋಗಲಿದೆ. ಕೋಪ ಎಂಬುದು ಅಜ್ಞಾನದ ಸಂಕೇತ. ಕೋಪವನ್ನು ಗೆಲ್ಲಬೇಕು. ಇಲ್ಲವಾದರೆ ಬದುಕಿಗೆ ಮುಕ್ತಿ ದೊರೆಯುವುದಿಲ್ಲವೆಂದರು.

ಕೋಪ, ಅತಿ ಆಸೆ ಹಾಗು ದುಶ್ಚಟ ಮನುಕುಲದ ಅಂತ್ಯಕ್ಕೆ ಕಾರಣವಾಗುತ್ತಿವೆ. ಮಾನವೀಯ ಮೌಲ್ಯಗಳು ಮನುಷ್ಯನ ತಿದ್ದುವಂತಹ ದಾರಿ ದೀಪ. ಮಾನವೀಯತೆ ಮರೆತರೆ ಮೃಗಗಳಿಗೂ ಮನುಷ್ಯನಿಗೂ ಏನೂ ವ್ಯತ್ಯಾಸ ಇರುವುದಿಲ್ಲ ಎಂದು ತಿಳಿಸಿದರು.

ದಣಿದು ಬಂದ ದೇಹಗಳಿಗೆ ವಿಶ್ರಾಂತಿ, ಹಸಿದು ಬಂದವರಿಗೆ ಪ್ರಸಾದ ಹಾಗು ಜ್ಞಾನ ಅರಿಸಿ ಬಂದವರಿಗೆ ವಿದ್ಯೆ ನೀಡುವುದೇ ಮಠ-ಮಾನ್ಯಗಳ ಪರಂಪರೆ ಹಾಗು ಸಂಸ್ಕೃತಿಯೆಂದರು. ದೇವರನ್ನು ಪೂಜಿಸಿದರೆ ಮನಸ್ಸಿಗೆ ನೆಮ್ಮದಿ ಸಿಗುತ್ತದೆ. ಗುರು ಹಿರಿಯರಿಗೆ ಗೌರವ ನೀಡಿದರೆ ಮಾನವೀಯತೆ ಮೌಲ್ಯ ಬೆಳೆಯುತ್ತದೆ. ಧಾರ್ಮಿಕ ಕಾರ್ಯಗಳಲ್ಲಿ ತೊಡಗಿದರೆ ಬದುಕಿಗೆ ಮುಕ್ತಿ ದೊರೆಯಲಿದೆ ಎಂದು ಸಲಹೆ ನೀಡಿದರು.

ಹೆಣ್ಣನ್ನು ತಾಯಿಯಾಗಿ ನೋಡುವುದು ನಮ್ಮ ಸಂಸ್ಕೃತಿ. ಭಾರತೀಯ ಸಂಸ್ಕೃತಿಯಲ್ಲಿ ಶೀಲಕ್ಕೆ ಗೌರವವಿದೆ. ಸೀರೆಯು ರಕ್ಷಣಾ ಕವಚವಾಗಿದೆ. ಹೆಣ್ಣು ಮಕ್ಕಳು ಸೀರೆಯನ್ನುಟ್ಟರೆ ನಮ್ಮ ಸಂಸ್ಕೃತಿಗೆ ಗೌರವ ಸಿಗುತ್ತದೆಂದು ಮಹಿಳೆಯರಿಗೆ ಕಿವಿಮಾತು ಹೇಳಿದರು.

ಶ್ರೀ ಚಂದ್ರಶೇಖರ ಗುರೂಜಿ ಮಾತನಾಡಿ, ಮನುಷ್ಯನು ತನ್ನ ದುರಾಸೆಯಿಂದ ಪ್ರಕೃತಿಯ ಮೇಲೆ ದಾಳಿ ಮಾಡುತ್ತಿದ್ದಾನೆ. ಪ್ರಾಣಿ, ಪಕ್ಷಿಗಳು ಹಾಗು ಮರಗಳಿಗೆ ಇರುವ ಜ್ಞಾನ ಮನುಕುಲಕ್ಕೆ ಇಲ್ಲ ಎಂದು ಅಸಮಾಧಾನ ಹೊರಹಾಕಿದರು.

ಭೂಮಿಯ ಮೇಲೆ, ನೀರು ಹಾಗು ಗಾಳಿಯಲ್ಲಿ ಸೇರಿ 84 ಲಕ್ಷ ಜೀವಿಗಳಲ್ಲಿ ಮನುಷ್ಯ ಜನ್ಮವೇ ಶ್ರೇಷ್ಠ. ಆದರೆ ಮನುಷ್ಯನು ಮಾನವೀಯತೆ ಮರೆತು ನಾನು, ನನ್ನದು, ಎಲ್ಲವೂ ನನಗೆ ಬೇಕು ಎಂಬ ದುರಾಸೆಗೆ ಸಿಲುಕಿ ನಲುಗುತ್ತಿದ್ದಾನೆ. ಅದರಿಂದ ಹೊರ ಬರದೆ ಬದುಕಿನಲ್ಲಿ ಸಾರ್ಥಕತೆ ಪಡೆಯಲು ಸಾಧ್ಯವಿಲ್ಲ ಎಂದರು.

ಮಹಾ ಚಂಡಿಕಾ ಯಾಗದ ಪ್ರಯುಕ್ತ ಶ್ರೀ ಮೆಳಿಯಮ್ಮ ದೇವಿಗೆ ವಿಶೇಷ ಪೂಜಾ ಕೈಂಕರ್ಯಗಳು ನೆರವೇರಿದವು. ಮಹಾಗಣಪತಿ ಹೋಮ, ಪುಣ್ಯಾಹ, ಅಂಕುರಾರ್ಪಣೆ, ದುರ್ಗಾ ಮಂಡಲ ಆರಾಧನೆ, ದುರ್ಗಾ ಸಪ್ತಶತಿ ಪಾರಾಯಣ, ಪೂರ್ಣಾಹುತಿಯೊಂದಿಗೆ ಮಹಾಮಂಗಳಾರತಿ ನೆರವೇರಿತು. ಮಹಿಳೆಯರಿಗೆ ಬಾಗಿನ ಅರ್ಪಿಸಲಾಯಿತು. ಕಲಾ ಪರಿವಾರದಿಂದ ಭಜನಾ ಕಾರ್ಯಕ್ರಮ ನಡೆಯಿತು. ಆಧ್ಯಾತ್ಮಿಕ ಕೇಂದ್ರದ ಕಾರ್ಯದರ್ಶಿ ಅಮೋಘ, ಸಮರ ಸೇನೆ ರಾಜ್ಯಾಧ್ಯಕ್ಷ ಭರತ್ ಗೌಡ, ಪ್ರಮುಖರಾದ ಉಮಾ ಮಹೇಶ್, ಚೆನ್ನಪ್ಪ, ಮಹದೇವ್, ನಂಜಪ್ಪ ಇತರರಿದ್ದರು.

# ಹೇಮಾವತಿ ನದಿ ತಟದಲ್ಲಿ ಮರಳು ದಂಧೆ ಶುರು

» **ಮೊದಲನೇ ಪುಟದಿಂದ**

ತುಂಬಿಕೊಂಡು ತಾಲ್ಲೂಕಿನ ವಿವಿಧೆಡೆಗೆ ರಾತ್ರೋರಾತ್ರಿ ಸಾಗಿಸಿ, ಖನಿಜ ಸಂಪತ್ತನ್ನು ಲೂಟಿ ಹೊಡೆಯುತ್ತಿದ್ದಾರೆ. ಇನ್ನು ಕೆಲವರು ತಮ್ಮ ಜಮೀನಿಗಳ ಬಳಿ ಲೋಡ್‌ಗಟ್ಟಲೇ ಮರಳನ್ನು ಸಂಗ್ರಹಿಸಿಟ್ಟುಕೊಳ್ಳುತ್ತಿದ್ದು, ಅಗತ್ಯ ಇರುವವರೆಗೆ ಲಾರಿಗಳಲ್ಲಿ ತುಂಬಿ ಕಳುಹಿಸುತ್ತಿದ್ದಾರೆ. ಅವ್ಯಾಹತವಾಗಿ ಅಕ್ರಮ ಮರಳು ಸಾಗಣೆ ನಡೆಯುತ್ತಿದ್ದರೂ ಕಂದಾಯ ಇಲಾಖೆ, ಗಣಿ ಮತ್ತು ವಿಜ್ಞಾನ ಇಲಾಖೆ ಅಧಿಕಾರಿಗಳು, ಪೊಲೀಸರು ಕಣ್ಣುಚ್ಚಿ ಕುಳಿತಿದ್ದಾರೆ.

ಸ್ಥಳೀಯರು ದೂರು ನೀಡಿದರೂ ಪೊಲೀಸರು ಸ್ಪಂದಿಸುವುದಿಲ್ಲ, ಕೆಲ ಪೊಲೀಸರೇ ದಂಧೆಕೋರರೊಂದಿಗೆ ಶಾಮೀಲಾಗಿದ್ದಾರೆ. ಗ್ರಾಮಸ್ಥರು ತೀವ್ರ ವಿರೋಧ ವ್ಯಕ್ತಪಡಿಸಿದಾಗಷ್ಟೇ ಆಗೊಮ್ಮೆ ಈಗೊಮ್ಮೆ ಜನರ ಕಣ್ಣಿಗೆ ಮಣ್ಣೆರಚಲು ದಾಳಿ ನಡೆಸಿ ವಾಹನಗಳನ್ನು ವಶಪಡಿಸಿಕೊಂಡು ಪುನಃ ಬಿಟ್ಟು ಕಳಿಸಲಾಗುತ್ತಿದೆ.

# ಮನೆ ಬೀಗ ಮುರಿದು ಆಭರಣ ಕಳವು



**ಹಾಸನ:** ಮನೆಯಲ್ಲಿ ಯಾರೂ ಇಲ್ಲದಿರುವುದನ್ನು ಗಮನಿಸಿ ಬೀಗ ಮುರಿದು ಒಳನುಗ್ಗಿರುವ ಕಳ್ಳರು ಅಂದಾಜು 15 ಲಕ್ಷ ರೂ. ಮೌಲ್ಯದ ಚಿನ್ನಾಭರಣ ಕಳವು ಮಾಡಿರುವ ಘಟನೆ ನಗರದ ಶಾಂತಿನಗರದಲ್ಲಿ ಬೆಳಕಿಗೆ ಬಂದಿದೆ.

ಶಾಂತಿನಗರ 4ನೇ ಅಡ್ಡರಸ್ತೆಯ ಶಿವಕುಮಾರ ಸ್ವಾಮೀಜಿ ರಸ್ತೆಯಲ್ಲಿರುವ ಕುಮಾರಸ್ವಾಮಿ ಎಂಬುವವರ ಮನೆಯಲ್ಲಿ ಕಳ್ಳತನವಾಗಿದೆ. ಕುಟುಂಬ ಸದಸ್ಯರು ಡಿ.31 ರಂದು ಬೆಂಗಳೂರಿನ ಸಂಬಂಧಿಕರ ಮನೆಗೆ ತೆರಳಿದ್ದರು. ಸೋಮವಾರ ಸಂಜೆ ವಾಪಾಸ್ ಬಂದಾಗ ಮನೆ ಬಾಗಿಲು ಮುರಿದಿರುವುದು ಗೊತ್ತಾಗಿದೆ. ಪೆನ್ಷನ್ ಮೊಹಲ್ಲಾ ಠಾಣೆ ಪೊಲೀಸರು, ಶ್ವಾನದಳ, ಬೆರಳಚ್ಚು ಗಾರರೊಂದಿಗೆ ಸ್ಥಳಕ್ಕೆ ದೌಡಾಯಿಸಿ ಪರಿಶೀಲಿಸಿದರು.

ಬೀರುವಿನಲ್ಲಿಟ್ಟಿದ್ದ ಚಿನ್ನದ ಸರ, ಲಕ್ಷ್ಮೀ ಡಾಲರ್, ನೆಕ್ಲೆಸ್, ಎರಡು ಹರಳಿನ ಉಂಗುರ, ಚಿನ್ನದ ಓಲೆ, ಜುಮುಕಿ ಮತ್ತಿತರ ಚಿನ್ನಾಭರಣ ಕಳುವಾಗಿವೆ.



**ಸಕಲೇಶಪುರ: ತಾಲ್ಲೂಕಿನ ಬಾಳ್ಳುಪೇಟೆಯ ನಿರಂತರ ಯೋಗ ಕೇಂದ್ರದ ಸೇವೆ ಗುರುತಿಸಿ ಕರ್ನಾಟಕ ಮಾನವ ಹಕ್ಕುಗಳ ಸಂರಕ್ಷಣಾ ಸಂಸ್ಥೆ ಡಾ.ನಾಗಲಕ್ಷ್ಮಿ ಚೌಧರಿ ಜನ ಸೇವಾ ಸಂಸ್ಥೆಯು 2026ನೇ ಸಾಲಿನ ಸಾಲು ಮರದ ತಿಮ್ಮಕ್ಕ ಸೇವಾ ರತ್ನ ಪ್ರಶಸ್ತಿ ನೀಡಿ ಗೌರವಿಸಿದೆ.**
**ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ನಿರಂತರ ಯೋಗ ಕೇಂದ್ರ ಅಧ್ಯಕ್ಷ ಎ.ಎನ್. ದಾಮೋದರ್, ಸದಸ್ಯರಾದ ತೇಜಸ್, ರವೀಂದ್ರ ಕುಮಾರ್, ರಿತೇಶ್ ಕುಮಾರ್, ವಸಂತ್ ಕುಮಾರ್, ಗುರುದೇವ್, ಕುಮಾರ್ ಇತರರಿದ್ದರು.**

# ಕಾಣೆಯಾದ ವ್ಯಕ್ತಿ ಪತ್ತೆಗೆ ಮನವಿ

• ಪ್ರಜೋದಯ ವರದಿ



**ಹಾಸನ:** ಕೆಲಸ ಅರಸಿ ತೆರಳಿದ್ದ ವ್ಯಕ್ತಿ ಸುಮಾರು 2 ತಿಂಗಳಿಂದ ವಾಪಾಸ್ ಬಂದಿಲ್ಲ. ಆತನ ಸುಳಿವು ಸಿಕ್ಕರೆ ಸಂಪರ್ಕಿಸಲು ಕೋರಿದೆ.

ಬಿಟ್ಟಗೌಡನಹಳ್ಳಿ ನಿವಾಸಿ ಶಂಕರ (54) 2025ರ ನ.21 ರಂದು ಕೆಲಸ ಹುಡುಕಿಕೊಂಡು ಹೋಗಿದ್ದ. ಎಷ್ಟೇ ಹುಡುಕಾಡಿದರೂ ಆತನ ಸುಳಿವು ಸಿಗದ ಹಿನ್ನಲೆಯಲ್ಲಿ ನಗರ ಠಾಣೆ ಯಲ್ಲಿ ನಾಪತ್ತೆ ಪ್ರಕರಣ ದಾಖಲಿಸ ಲಾಗಿದೆ.

**ವ್ಯಕ್ತಿಯ ಚಹರೆ:** ಸಾಧಾರಣ ಮೈಕಟ್ಟು ಎಣ್ಣೆ ಕೆಂಪು ಬಣ್ಣ, ಕೋಲು ಮುಖ, 5.7 ಎತ್ತರ, ಕನ್ನಡ ಮಾತನಾಡುತ್ತಾರೆ. ಬಲ ಭುಜದ ಮೇಲೆ ವೆಂಕಟೇಶ್ವರಸ್ವಾಮಿ ದೇವರ ಹಚ್ಚೆ ಹಾಕಿಸಿದ್ದಾರೆ. ಕಾಣೆಯಾದ ದಿನ ಕ್ರೀಮ್ ಕಲರ್ ಕಪ್ಪು ಅಡ್ಡ ಗೆರೆವುಳ್ಳ ತುಂತು ತೋಳಿನ ಶರ್ಟ್, ಕಾಫಿ ಬಣ್ಣದ ಪ್ಯಾಂಟ್ ಧರಿಸಿದ್ದರು. ವ್ಯಕ್ತಿಯ ಮಾಹಿತಿ ಸಿಕ್ಕರೆ ನಗರ ಪೊಲೀಸ್ ಠಾಣೆ ದೂ.ಸಂ. 08172-26833, 94808 04745 ಅಥವಾ ಹತ್ತಿರದ ಪೊಲೀಸ್ ಠಾಣೆಗೆ ಮಾಹಿತಿ ನೀಡಲು ಕೋರಿದೆ.

# ಯಶ್ ತಾಯಿ ಮನೆ ವಿವಾದ: ದೇವರಾಜು ವಿರುದ್ಧ ದೂರು

• ಪ್ರಜೋದಯ ವರದಿ

**ಹಾಸನ:** ಚಲನಚಿತ್ರ ನಟ ಯಶ್ ತಾಯಿ ಪುಷ್ಪಾ ಅವರ ಮನೆಯ ಕಾಂಪೌಂಡ್ ತೆರವುಗೊಳಿಸಿದ ಪ್ರಕರಣ ಸಂಬಂಧ ಜಿಪಿಎ ಹೋಲ್ಡರ್ ಎಂದು ಹೇಳಿಕೊಂಡಿರುವ ದೇವರಾಜು ವಿರುದ್ಧ ಪುಷ್ಪಾ ಅವರ ಸಂಬಂಧಿ ದುರ್ಗಾಪ್ರಸಾದ್ ಎಂಬುವವರು ಬಡಾವಣೆ ಠಾಣೆಗೆ ದೂರು ನೀಡಿದ್ದಾರೆ. ಜಾಗದ ವಿಚಾರವಾಗಿ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದ್ದರೂ ಏಕಾಏಕಿ ಕಾಂಪೌಂಡ್ ನಾಶಪಡಿಸಿ ನಷ್ಟವುಂಟು ಮಾಡಿದ್ದಾರೆ ಹಾಗು ದೇವರಾಜು ಕಡೆಯಿಂದ ಪುಷ್ಪಾಗೆ ಜೀವ ಬೆದರಿಕೆ ಇದೆ ಎಂದು ದುರ್ಗಾಪ್ರಸಾದ್ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

ಭಾನುವಾರ ಬೆಳಿಗ್ಗೆ ಜೆಸಿಬಿ ಮೂಲಕ ಕಾಂಪೌಂಡ್ ತೆರವು ಕಾರ್ಯಾಚರಣೆ ನಡೆಸುತ್ತಿದ್ದರು. ಅದನ್ನು ಪ್ರಶ್ನಿಸಿದ್ದಕ್ಕೆ ನಮಗೆ ಪ್ರಾಣ ಬೆದರಿಕೆ ಹಾಕಿದ್ದಾರೆ. ಜಾಗವನ್ನು ಪುಷ್ಪಾ ಅವರು ಗಿರೀಶ್ ಎಂಬುವವರಿಂದ ಕ್ರಯಕ್ಕೆ ತೆಗೆದುಕೊಂಡಿದ್ದಾರೆಂದು ದುರ್ಗಾಪ್ರಸಾದ್ ಪ್ರತಿಕ್ರಿಯಿಸಿದ್ದಾರೆ. ದೇವರಾಜು ಹಾಗು ಲಕ್ಷ್ಮಮ್ಮ ಎಂಬುವವರ ಜಾಗವೇ ಇಲ್ಲ. ಮನೆಯ ವಾರಸುದಾರರು ಇಲ್ಲದೇ ಇದ್ದಾಗ ಏಕಾಏಕಿ ಒಡೆದು ಹಾಕಿದ್ದು, ಲಕ್ಷಾಂತರ ರೂಪಾಯಿ ನಷ್ಟವುಂಟಾಗಿದೆ. ಈ ಅವ್ಯವಹಾರ ಹಿಂದೆ ಹಿಂದೆ ಸತ್ಯಮಂಗಲ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಯಾಗಿದ್ದ ನಟರಾಜ್ ಅವರ ಕೈವಾಡವಿದೆ. ನಟರಾಜ್ ಮತ್ತು ದೇವರಾಜು ಈ ಜಾಗದ ಮೇಲೆ ಕಣ್ಣಿಟ್ಟಿದ್ದರು. ಜಾಗದ ಈ ಸ್ವತ್ತು ಮಾಡಿ ಕೊಟ್ಟಿದ್ದೇ ನಟರಾಜ್ ಎಂದು ಆರೋಪಿಸಿದರು.

ಕಳೆದ ಐದು ವರ್ಷದಿಂದ ಪುಷ್ಪಾ ಅವರು ಕಂದಾಯ ಕಟ್ಟಿದ್ದಾರೆ. ಗಿರೀಶ್ ಅವರಿಂದ 2018ರಲ್ಲಿ ಜಾಗ ಖರೀದಿಸಿದ್ದು, ಕ್ರಯ ಆಗಿದೆ. ಪುಷ್ಪಾ ಅವರ ಹಾಸನದ ಜಮೀನುಗಳನ್ನು ನಾನೇ ನೋಡಿಕೊಳ್ಳುತ್ತೇನೆ. ವಿದ್ಯಾನಗರ ಮನೆಯಲ್ಲಿ ನಾನೇ ವಾಸವಿರುತ್ತೇನೆ. ಭಾನುವಾರ ಜಮೀನಿಗೆ ಹೋದಾಗ ಏಕಾಏಕಿ ಒಡೆದು ಹಾಕಿದ್ದಾರೆಂದು ಆಕ್ರೋಶ ವ್ಯಕ್ತಪಡಿಸಿದರು. ಚೆಕ್‌ಬಂದಿಯಲ್ಲಿ ಹೊಲ ಎಂದು ತೋರಿಸಿದ್ದಾರೆ. ಈ ನಿವೇಶನ ಸುತ್ತ ಮನೆಗಳಿವೆ. ಈ ಸಂಬಂಧ ಪುಷ್ಪಾ ಅವರಿಗೆ ಯಾವ ನೋಟೀಸ್ ಕೊಟ್ಟಿಲ್ಲ. ಕಟ್ಟಡ ತೆರವುಗೊಳಿಸಿರುವುದರ ವಿರುದ್ಧ ಕಾನೂನು ಹೋರಾಟ ಮುಂದುವರಿಸುವುದಾಗಿ ಹೇಳಿದರು.

# ಮುದ್ರಣ ಮಾಧ್ಯಮ ವಿಶ್ವಾಸಾರ್ಹತೆ ಉಳಿಸಿಕೊಂಡಿದೆ

» **ಮೊದಲನೇ ಪುಟದಿಂದ**

ತಾಲ್ಲೂಕು ಪತ್ರಕರ್ತರ ಸಂಘದ ಕಟ್ಟಡಕ್ಕೆ 25 ಲಕ್ಷ ರೂ. ಅನುದಾನ ಇದ್ದು, ಕೂಡಲೇ ಕೆಲಸ ಪ್ರಾರಂಭಿಸಿ ಎಂದು ಸಲಹೆ ನೀಡಿದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು ಅವರು ಮಾತನಾಡಿ, ಹೊಸ ಪದಾಧಿಕಾರಿಗಳಿಗೆ ಪೂರ್ಣ ಸಹಕಾರ ಕೊಡಬೇಕು. ಅಭಿವೃದ್ಧಿಗೆ ಎಲ್ಲರ ಸಹಕಾರ ಮುಖ್ಯ. ಅಧಿಕಾರ ಇದ್ದಾಗ ಸಂಘ ಬೇಕು, ಇಲ್ಲದಿದ್ದಾಗ ಬೇಡ ಎಂಬ ಧೋರಣೆ ಬೇಡ. ಯಾರೂ ಮುಖ್ಯರಲ್ಲ ಯಾರೂ ಅಮುಖ್ಯರಲ್ಲ. ಪ್ರತಿಯೊಬ್ಬರು ಶಿಸ್ತಿನ ಚೌಕಟ್ಟು ಪಾಲಿಸಿ, ಇಲ್ಲದಿದ್ದರೆ ಕ್ರಮ ಅನಿವಾರ್ಯವೆಂದು ಎಚ್ಚರಿಕೆ ನೀಡಿದರು. ಶಾಸಕರು ಸಚಿವ ಸಂಪುಟ ಸಭೆಯಲ್ಲಿ ಅನುಮತಿ ಕೊಡಿಸಿ ನಿವೇಶನ ನೀಡಿದ್ದಾರೆ. ಸಹಾಯ ಮಾಡಿದವರ ಮರೆಯ ಬೇಡಿ, ಭವನ ಕಟ್ಟುವುದರ ಜೊತೆಗೆ ಮನಸು, ಹೃದಯ ಗಳನ್ನೂ ಕಟ್ಟಬೇಕಿದೆ ಎಂದರು.

> ಅರಸೀಕೆರೆ ಪತ್ರಿಕೋದ್ಯಮಕ್ಕೆ ದೊಡ್ಡ ಇತಿಹಾಸವಿದೆ. ಅದನ್ನು ಉಳಿಸಿ, ಬೆಳೆಸಿಕೊಂಡು ಹೋಗಬೇಕು. ವೃತ್ತಿ ಗೌರವ ಎತ್ತಿ ಹಿಡಿದರೆ ವ್ಯಕ್ತಿತ್ವಕ್ಕೆ ಮೆರುಗು ಬರಲಿದೆ. ಅದಕ್ಕೆ ಗೌರವ ನೀಡಿದರೆ ತಾಕತ್ತು ಹೆಚ್ಚಲಿದೆ. ಚುನಾವಣೆ ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಿ ಎಲ್ಲರೂ ಒಟ್ಟಾಗಿ ಮುಂದುವರಿಯಬೇಕು.
> -ಶಿವಾನಂದ ತಗಡೂರು, ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ

ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಅವರು ಮಾತನಾಡಿ, ಸಕ್ರಿಯವಾಗಿರುವ ಪತ್ರಕರ್ತರನ್ನು ಹೊರಗಿಡುವ ಕೆಲಸ ಬೇಡ. ಹಿರಿಯರು ಕಟ್ಟಿದ ಸಂಸ್ಥೆ, ಉತ್ತಮವಾಗಿ ಮುಂದೆ ಸಾಗಲಿ. ಭವನದ ಕೆಲಸಗಳು ಆದಷ್ಟು ಬೇಗ ಶುರು ವಾಗಲಿ ಎಂದು ಹಾರೈಸಿದರು.

ಕೆಯುಡಬ್ಲ್ಯೂಜೆ ಮುಂಬೈ, ಕಾಸರಗೂಡಿನಲ್ಲಿ ಘಟಕ ಹೊಂದಿದೆ. ದೆಹಲಿಯಲ್ಲೂ ಘಟಕ ಆಗುತ್ತಿದೆ. ಅದಕ್ಕೆ ಕಾರಣ ಶಿವಾನಂದ ತಗಡೂರು ಎಂದ ಅವರು, ಮೊದಲು ಸಂಘವೆಂದರೆ ಹಾಸ್ಯ ಮಾಡುತ್ತಿದ್ದರು. ಈಗ ರಾಷ್ಟ್ರಕ್ಕೆ ಮಾದರಿ ಎನಿಸಿದೆ. ಅನೇಕರ ಶ್ರಮದಿಂದ ಸದೃಢವಾಗಿರುವ ಸಂಘ ಒಂಬತ್ತು ಸಾವಿರ ಸದಸ್ಯರನ್ನು ಒಳಗೊಂಡಿದೆ ಎಂಬುದು ಹೆಮ್ಮೆಯ ವಿಚಾರವೆಂದರು.

ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ ಅವರು ಮಾತನಾಡಿ, ಸಂಘ ಸದೃಢವಾಗಬೇಕು. ಹಿಂದಿನ ಗೌರವ ಉಳಿಯಬೇಕೆಂದರೆ ಪತ್ರಕರ್ತ ಪರಿಶುದ್ಧನಾಗ ಬೇಕು. ಹಣ ವಸೂಲಿ ಪ್ರಕರಣ ಸಂಬಂಧ ಜಿಲ್ಲೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅವರಿಗೆ ದೂರು ನೀಡಿ ದ್ದೇವೆ. ಮುಂದೆ ಎಲ್ಲೆಡೆ ಈ ಕೆಲಸ ಆಗಬೇಕು. ಕಾನೂನು ವಿರೋಧಿ ಚಟುವಟಿಕೆಗೆ ಅವಕಾಶ ನೀಡಿದರೆ ನಿಮ್ಮ ಗೌರವಕ್ಕೆ ಧಕ್ಕೆ ಯಾಗಲಿದೆ ಎಂದು ಎಚ್ಚರಿಕೆ ನೀಡಿದರು.

ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಅವರು ಮಾತನಾಡಿ, ಚುನಾವಣೆಯಲ್ಲಿ ಸೋಲು ಗೆಲುವು ಸಹಜ. ಗೆದ್ದವರು, ಸೋತವರು ನಮ್ಮವರೇ. ಯಾರ ಬಗ್ಗೆಯೂ ಅಪಪ್ರಚಾರ ಮಾಡುವುದು ಬೇಡ. ಸೋತವರು ಸಂಘ ವಿರೋಧಿ ಚಟುವಟಿಕೆಯಲ್ಲಿ ತೊಡಗಬಾರದು. ಸಂಘಕ್ಕೆ ಸದಸ್ಯರು ಅನಿವಾರ್ಯ ಅಲ್ಲ, ಸಂಘ ಅನಿವಾರ್ಯವೆಂದರು.

ಅರಸೀಕೆರೆ ಸಂಘದ ನೂತನ ಅಧ್ಯಕ್ಷ ಟಿ.ಆನಂದ್ ಮಾತನಾಡಿದರು. ಜಿಲ್ಲಾ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ. ಸುರೇಶ್, ತಾಲ್ಲೂಕು ಸಂಘದ ಪ್ರಧಾನ ಕಾರ್ಯದರ್ಶಿ ನವೀನ್ ಕುಮಾರ್, ಉಪಾಧ್ಯಕ್ಷ ಹೇಮಂತ್ ಕುಮಾರ್, ಮಾಡಾಳು ಸೋಮಣ್ಣ, ಜಿಲ್ಲಾ ಕಾರ್ಯಕಾರಿ ಸಮಿತಿ ಸದಸ್ಯ ಹಾರನಹಳ್ಳಿ ನಾಗೇಂದ್ರ, ತಾಲ್ಲೂಕು ಪತ್ರಕರ್ತರ ಸಂಘದ ಮಾಜಿ ಅಧ್ಯಕ್ಷ ರಾಮಚಂದ್ರ, ಕಣಕಟ್ಟೆ ಕುಮಾರ್, ನಿರ್ದೇಶಕರಾದ ವಿಜಯ ಕುಮಾರ್, ಜಗದೀಶ್ ರಂಗನಾಥ್, ರವಿಶಂಕರ್, ಸಾದಿಕ್ ಬಾಣಾವರ ಮತ್ತಿತರರಿದ್ದರು.

# ವರ್ಲ್ಡ್ ಬುಕ್ ಆಫ್ ರೆಕಾರ್ಡ್‌ಗೆ ಹಾಸನ ವಿದ್ಯಾರ್ಥಿಗಳ ಟೆಲಿಸ್ಕೋಪ್ ಭಾಜನ

• ಪ್ರಜೋದಯ ವರದಿ



**ಹಾಸನ:** ದೊಡ್ಡಬಳ್ಳಾಪುರದ ಬೆಸೆಂಟ್ ಪಾರ್ಕ್‌ನಲ್ಲಿ ಇತ್ತೀಚೆಗೆ ನಡೆದ ಟೆಲಿಸ್ಕೋಪ್ ತಯಾರಿಕಾ ತರಬೇತಿ ಕಾರ್ಯಾಗಾರದಲ್ಲಿ ಜಿಲ್ಲೆಯ ಭಾರತ ಸೇವಾದಳ ವಿದ್ಯಾರ್ಥಿಗಳು ತಯಾರಿಸಿದ ಟೆಲಿಸ್ಕೋಪ್ l l i d ca , l i d ca , i d ca ಗೆ ದಾಖಲಾಗಿದೆ.

ಯಾದಗಿರಿಯಲ್ಲಿ ನಡೆದ ಐದನೇ ವೈಜ್ಞಾನಿಕ ಸಮ್ಮೇಳನದಲ್ಲಿ ಇಸ್ರೋ ಮಾಜಿ ಅಧ್ಯಕ್ಷ ಡಾ.ಎ.ಎಸ್.ಕಿರಣ್ ಕುಮಾರ್ ಅವರು ಭಾರತ ಸೇವಾದಳ ಜಿಲ್ಲಾ ಸಂಘಟಕಿ ವಿ.ಎಸ್.ರಾಣಿ ಅವರಿಗೆ ಪ್ರಮಾಣ ಪತ್ರ ವಿತರಿಸಿದರು. ತರಬೇತಿ ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಯಾಗಿ ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಸಂಸ್ಥಾಪಕ ಡಾ.ಹುಲಿಕಲ್ ನಟರಾಜ್ ಪಾಲ್ಗೊಂಡಿದ್ದರು. ವೈಜ್ಞಾನಿಕ ಸಮ್ಮೇಳನದ ಮಹಾ ಅಧಿವೇಶನದಲ್ಲಿ ಶ್ರೀ ಶಾಂತವೀರ ಗುರು ಮುರುಘ ರಾಜೇಂದ್ರ ಸ್ವಾಮೀಜಿ, ಸಿದ್ದರಾಮಯ್ಯ ಸ್ವಾಮೀಜಿ, ಭಾರತ ಸೇವಾದಳದ ಕೇಂದ್ರ ಸಮಿತಿಯ ಸಂಘಟನಾ ಕಾರ್ಯದರ್ಶಿ ರವಿಕುಮಾರ್‌ಗೌಡ, ರಾಜ್ಯ ವೈಜ್ಞಾನಿಕ ಸಂಶೋಧನಾ ಪರಿಷತ್ತಿನ ಜಿಲ್ಲಾಧ್ಯಕ್ಷ ರವಿ ನಾಕಲಗೂಡು, ನಿಚಿತಾ ಕುಮಾರಿ, ಕೆ.ವಿ.ಯೋಗೀಶ ಮತ್ತಿತರರಿದ್ದರು.

# ಇಂದಿನಿಂದ ಜ.12ರ ವರೆಗೆ ಗಮಕ ಹಬ್ಬ-ಕವಿ ನಮನ



• ಪ್ರಜೋದಯ ವರದಿ

**ಹಾಸನ:** ಕರ್ನಾಟಕ ಗಮಕ ಕಲಾ ಪರಿಷತ್, ಜಿಲ್ಲಾ ಘಟಕದಿಂದ ಜ.6 ರಿಂದ 12ರ ವರೆಗೆ 23ನೇ ವರ್ಷದ ಗಮಕ ಹಬ್ಬ-ಕವಿನಮನ ಹಮ್ಮಿಕೊಳ್ಳಲಾಗಿದೆಯೆಂದು ಗಮಕ ಕಲಾ ಪರಿಷತ್ ಜಿಲ್ಲಾಧ್ಯಕ್ಷ ಗಣೇಶ ಉಡುಪ ಅವರು ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ನಗರದ ಶ್ರೀ ಸೀತಾ ರಾಮಾಂಜನೇಯ ದೇವಾಲಯದ ಸಪ್ತಪದಿ ಸೌದಾಮಿನಿ ಸಭಾಂಗಣದಲ್ಲಿ ಪ್ರತಿದಿನ ಸಂಜೆ 5 ಗಂಟೆಗೆ ಕಾರ್ಯಕ್ರಮ ಆರಂಭವಾಗಲಿದೆ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ನಗರ ಗೃಹ ನಿರ್ಮಾಣ ಸಹಕಾರ ಸಂಘ, ಸಂಸ್ಕಾರ ಭಾರತೀ, ಸೀತಾರಾಮಾಂಜನೇಯ ಸೇವಾ ಸಮಿತಿ ಸಮಾರಂಭಕ್ಕೆ ಸಹಕಾರ ನೀಡಿದೆ. ಏಳು ಕವಿಗಳ ಕಾವ್ಯಗಳ ಗಾಯನ-ವ್ಯಾಖ್ಯಾನ ನಡೆಯಲಿದೆ. ನಾಡಿನ ವಿವಿಧ ಭಾಗಗಳಿಂದ ಖ್ಯಾತ ಗಮಕಿಗಳು ಹಾಗು ವ್ಯಾಖ್ಯಾನ ಕಾರರು ಆಗಮಿಸಲಿದ್ದಾರೆಂದರು.

ಜ.6ರ ಮಂಗಳವಾರ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಖ್ಯಾತ ಸಾಹಿತಿ ಹಾಗು ಅಷ್ಟಾವಧಾನಿ ಡಾ.ಕಬ್ಬಿನಾಲೆ ವಸಂತ ಭಾರದ್ವಾಜ್ ಕಾರ್ಯಕ್ರಮ ಉದ್ಘಾಟಿಸಲಿದ್ದು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಹೆಚ್.ಪಿ.ತಾರಾನಾಥ್, ಉಪನ್ಯಾಸಕ ಡಾ.ಎಂ.ಎನ್. ಪಾಂಡುರಂಗ ಅತಿಥಿಗಳಾಗಿ ಭಾಗವಹಿಸಲಿದ್ದಾರೆಂದರು.

ಬೇಲೂರಿನ ಗಮಕ ವಿದುಷಿ ನವರತ್ನ ಎಸ್.ವಟಿಯವರಿಗೆ 'ಗಮಕ ಕಲಾಶ್ರೀ' ಬಿರುದು ಪ್ರದಾನ ಮಾಡಲಾಗುವುದು. ಮುದ್ದಣ ಕವಿಯ 'ರಾಮಾಶ್ವಮೇಧ' ಕಾವ್ಯಭಾಗವನ್ನು ಡಾ. ಕಬ್ಬಿನಾಲೆ ವಸಂತ ಭಾರದ್ವಾಜ್ ವ್ಯಾಖ್ಯಾನಿಸಲಿದ್ದು, ಹಾಸನದ ವಿದುಷಿ ರಾಧಾ ಕೃಷ್ಣ ಸ್ವರೂಪ್ ಗಾಯನ ಮಾಡಲಿದ್ದಾರೆ. ಜ.7ರಂದು ಕುಮಾರ ವ್ಯಾಸ ಭಾರತದ ಆಯ್ದ ಭಾಗ, ಜ.8 ರಂದು ಲಕ್ಷ್ಮೀಶ ಕವಿಯ ಜೈಮಿನಿ ಭಾರತ, 9 ರಂದು ರಾಘವಾಂಕ ಮಹಾಕವಿಯ ಹರಿಶ್ಚಂದ್ರ ಕಾವ್ಯ, 10 ರಂದು ಷಡಕ್ಷರದೇವನ ಶಬರಶಂಕರ ವಿಲಾಸ, 11 ರಂದು ಆಸೂರಿ ರಾಮಸ್ವಾಮಿ ಅಯ್ಯಂಗಾರ್ ವಿರಚಿತ ಗೋಕರ್ಣ ಮಹಿಮಾದರ್ಶ ಕಾವ್ಯಗಳ ಗಾಯನ-ವ್ಯಾಖ್ಯಾನ ನಡೆಯಲಿವೆ ಎಂದು ವಿವರಿಸಿದರು.

ಜ.12ರಂದು ಲೇಖಕಿ ಶಾಂತಾ ಗೋಪಾಲ್ ಅಧ್ಯಕ್ಷತೆಯಲ್ಲಿ ಸಮಾರೋಪ ಸಮಾರಂಭ ನಡೆಯಲಿದ್ದು, ನಗರ ಗೃಹ ನಿರ್ಮಾಣ ಸಹಕಾರ ಸಂಘದ ಅಧ್ಯಕ್ಷ ಎಂ.ಸುರೇಶ್ ಭಾಗವಹಿಸಲಿದ್ದಾರೆ. ಅದೇ ದಿನ ತೊಗಲು ಗೊಂಬೆ ಕಲಾವಿದ ಗುಂಡೂರಾಜ್, ಸಂಗೀತ-ನೃತ್ಯ ಕಲಾವಿದೆ ರಮ್ಯಾ ಸೂರಜ್, ಗಮಕ ವಿದುಷಿ ಲಕ್ಷ್ಮೀ ಜಯ ಪ್ರಕಾಶ್ ಹಾಗು ಡಾ||ಎನ್.ರಮೇಶ್ ಅವರನ್ನು ಸನ್ಮಾನಿಸಲಾಗುವುದೆಂದರು.

ಸುದ್ದಿಗೋಷ್ಠಿಯಲ್ಲಿ ರುಕ್ಮಿಣಿ ನಾಗೇಂದ್ರ, ಅನುಸೂಯಾ, ಕುಮಾರ ಸ್ವಾಮಿ ಇತರರಿದ್ದರು.

# ಭ್ರಷ್ಟಾಚಾರ ಪ್ರಶ್ನಿಸಿದ್ದಕ್ಕೆ ಹಲ್ಲೆ: ಆರೋಪ



• ಪ್ರಜೋದಯ ವರದಿ

**ಹಾಸನ:** ತಾಲ್ಲೂಕಿನ ಚಿಟ್ಟನಹಳ್ಳಿ ಗ್ರಾಮ ಪಂಚಾಯಿತಿಯಿಂದ ನಡೆಯುತ್ತಿದ್ದ ಭ್ರಷ್ಟಾಚಾರ ಪ್ರಶ್ನಿಸಿದ್ದಕ್ಕೆ ಪಂಚಾಯಿತಿ ಸದಸ್ಯ ಹಾಗು ಗುತ್ತಿಗೆದಾರನ ಬೆಂಬಲಿಗರು ತಮ್ಮ ಮೇಲೆ ಹಲ್ಲೆ ನಡೆಸಿದ್ದು ಮಾತ್ರವಲ್ಲದೆ ಕೆಆರ್‌ಎಸ್ ಪಕ್ಷದ ಬ್ಯಾನರ್ ಹರಿದು ಹಾಕಿದ್ದಾರೆಂದು ಪಕ್ಷದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಿ.ಬಿ.ಮಧು ಅವರು ಆರೋಪಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ಗ್ರಾಮದಲ್ಲಿ ಕಳಪೆ ರಸ್ತೆ ಕಾಮಗಾರಿ ನಡೆದಿದೆ. ಶಾಲೆ ಜಾಗ ತೆರವು ಮಾಡಿಸುವ ವಿಚಾರವಾಗಿ ಕೆಆರ್‌ಎಸ್ ಪಕ್ಷ ಸಾಕಷ್ಟು ಶ್ರಮ ವಹಿಸುತ್ತಿದೆ. ಈ ಬಗ್ಗೆ ಪ್ರಶ್ನಿಸಿದ್ದಕ್ಕೆ ನನ್ನ ವಿರುದ್ಧ ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ. ಸಾರ್ವಜನಿಕ ಆಸ್ತಿ ರಕ್ಷಣೆಗೆ ಹೋರಾಡುತ್ತಿರುವ ನನ್ನ ಮೇಲೆ ದ್ವೇಷ ಕಾರುತ್ತಿದ್ದಾರೆ. ಗ್ರಾಮ ಪಂಚಾಯಿತಿ ಸದಸ್ಯ ಮಧು, ಗುತ್ತಿಗೆದಾರ ಕುಮಾರ್ ಎಂಬುವವರ ಕುಮ್ಮಕ್ಕಿನಿಂದ ಜ.4ರ ರಾತ್ರಿ ನೀರುಗಂಟಿ ದಿನೇಶ್, ಸಿ.ಆರ್.ರಾಮಚಂದ್ರ ಅವರು ಅವಾಚ್ಯ ಶಬ್ದಗಳಿಂದ ನಿಂದಿಸಿ ಗ್ರಾಮ ಪಂಚಾಯಿತಿ ಅನುಮತಿ ಪಡೆದು ಅಳವಡಿಸಿದ್ದ ಕೆಆರ್‌ಎಸ್ ಪಕ್ಷದ ಬ್ಯಾನರ್ ಹರಿದು ಹಾಕಿದ್ದಾರೆಂದು ದೂರಿದರು.

ಈ ಬಗ್ಗೆ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಿಸಿದ್ದು ತಪ್ಪಿತಸ್ಥರ ವಿರುದ್ಧ ಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು. ಕೆಆರ್‌ಎಸ್ ಪಕ್ಷದ ಜಿಲ್ಲಾಧ್ಯಕ್ಷ ಉಮೇಶ್ ಬೆಳಗುಂಬ, ಉಪಾಧ್ಯಕ್ಷ ಜಗದೀಶ್, ನಿರಂಜನ, ಯೂನಸ್ ಇದ್ದರು.

# ಜ.10-11ಕ್ಕೆ ಹಾಸನಾಂಬ ಕಲಾಕ್ಷೇತ್ರದಲ್ಲಿ ನೃತ್ಯ ಸ್ಪರ್ಧೆ

• ಪ್ರಜೋದಯ ವರದಿ



**ಹಾಸನ:** ನಗರದ ಹಾಸನಾಂಬ ಕಲಾಕ್ಷೇತ್ರದಲ್ಲಿ ಜ.10 ಮತ್ತು 11 ರಂದು ವಿಲ್ ಪವರ್ ಆಫ್ ಯೂತ್ ಚಾರಿಟೆಬಲ್ ಟ್ರಸ್ಟ್ ಹಾಗು ಡಿ.ಜೆ.ಡಾನ್ಸ್ ಸ್ಟುಡಿಯೋ ವತಿಯಿಂದ ರಾಜ್ಯ ಮಟ್ಟದ ನೃತ್ಯ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಚಿದಾನಂದ್ ಅವರು ತಿಳಿಸಿದರು.

ಸುದ್ದಿಗೋಷ್ಟಿಯಲ್ಲಿ ಸೋಮವಾರ ಮಾತನಾಡಿ, ರಾಜ್ಯದ ಪ್ರತಿಭಾವಂತ ಮಕ್ಕಳಿಗೆ ಮತ್ತು ಯುವಕರಿಗೆ ಪ್ರೋತ್ಸಾಹಿಸುವ ಉದ್ದೇಶದಿಂದ ಕಾರ್ಯಕ್ರಮ ಆಯೋಜಿಸಲಾಗಿದೆ. ಡ್ಯಾನ್ಸ್ ಕರ್ನಾಟಕ ಡ್ಯಾನ್ಸ್ ಖ್ಯಾತಿಯ ರುದ್ರ ಮಾಸ್ಟರ್ ಹಾಗು ಜಿಮ್ನಾಸ್ಟಿಕ್ ಚಿರಾಗ್ ಟೈಸನ್ ಸೇರಿ ಅನೇಕರು ಭಾಗವಹಿಸಲಿದ್ದಾರೆಂದರು.

ನೃತ್ಯ ಸ್ಪರ್ಧೆಯಲ್ಲಿ ಗ್ರೂಪ್ಸ್ ವಿಭಾಗ ಓಪನ್ ಕ್ಯಾಟಗರಿಯಾಗಿದ್ದು ಪ್ರವೇಶ ಶುಲ್ಕ 500 ರೂ. ನಿಗದಿಪಡಿಸಲಾಗಿದೆ. ಪ್ರಥಮ ಬಹುಮಾನ 40 ಸಾವಿರ ರೂ. ಹಾಗು ಟ್ರೋಫಿ, ದ್ವಿತೀಯ ಬಹುಮಾನ 20 ಸಾವಿರ ರೂ. ಮತ್ತು ಟ್ರೋಫಿ, ತೃತೀಯ ಬಹುಮಾನ 10 ಸಾವಿರ ರೂ. ಹಾಗು ಟ್ರೋಫಿ ನೀಡಲಾಗುವುದೆಂದು ಮಾಹಿತಿ ನೀಡಿದರು.

ಸೋಲೋ ವಿಭಾಗದಲ್ಲಿ ಸಬ್ ಜ್ಯೂನಿಯರ್, ಜ್ಯೂನಿಯರ್ ಮತ್ತು ಸೀನಿಯರ್ ಕ್ಯಾಟಗರಿ ಗಳು ಇರಲಿದ್ದು ಪ್ರವೇಶ ಶುಲ್ಕ 1,000 ರೂ. ಆಗಿದೆ. ಸಬ್ ಜ್ಯೂನಿಯರ್ ವಿಭಾಗದಲ್ಲಿ ಪ್ರಥಮ ಬಹುಮಾನ 3,000 ರೂ., ದ್ವಿತೀಯ 2,000 ರೂ. ಹಾಗು ತೃತೀಯ 1,000 ನಗದು ಮತ್ತು ಟ್ರೋಫಿ ನೀಡಲಾಗುವುದು. ಜ್ಯೂನಿಯರ್ ಹಾಗೂ ಸೀನಿಯರ್ ವಿಭಾಗಗಳಲ್ಲಿ ಪ್ರಥಮ ಬಹುಮಾನ 5,000 ರೂ., ದ್ವಿತೀಯ 3,000 ರೂ. ಮತ್ತು ತೃತೀಯ 1,000 ರೂ. ನೀಡಲಾಗುತ್ತದೆಂದರು.

ಜ.10ರಂದು ಜಿಲ್ಲೆಯ ಮಕ್ಕಳಿಗೆ ಸೋಲೋ ಡ್ಯಾನ್ಸ್‌ಗೆ ಅವಕಾಶ ಕಲ್ಪಿಸಲಾಗಿದ್ದು, ಜ.11 ರಂದು ಇತರೆ ಜಿಲ್ಲೆಗಳ ಮಕ್ಕಳಿಗೆ ಸೋಲೋ ಹಾಗು ಗ್ರೂಪ್ಸ್ ನೃತ್ಯ ಸ್ಪರ್ಧೆ ನಡೆಯಲಿದೆ. ಸ್ಪರ್ಧೆ ಯಲ್ಲಿ ಭಾಗವಹಿಸುವ ಎಲ್ಲಾ ಮಕ್ಕಳಿಗೂ ಪ್ರಶಸ್ತಿ ಪತ್ರ ನೀಡಲಾಗುವುದು. ಹೆಚ್ಚಿನ ಮಾಹಿತಿಗೆ 9743229185 ಸಂಪರ್ಕಿಸಬಹುದಾಗಿದೆ ಎಂದರು.

ಸುದ್ದಿಗೋಷ್ಠಿಯಲ್ಲಿ ಟ್ರಸ್ಟ್‌ನ ಪ್ರಸಾದ್, ಅಪ್ಪು, ತೇಜಸ್, ಇತಿಹಾಸ್, ಮನೋಜ್ ಇತರರು ಹಾಜರಿದ್ದರು.

# ಫುಟ್‌ಪಾತ್ ಒತ್ತುವರಿ ತೆರವು : ಬೀದಿ ಬದಿ ವ್ಯಾಪಾರಿಗಳ ಆಕ್ರೋಶ

» **ಮೊದಲನೇ ಪುಟದಿಂದ**

ವಾದರೆ, ಮತ್ತೊಂದೆಡೆ ಬೀದಿಬದಿ ವ್ಯಾಪಾರಿಗಳು ತೀವ್ರ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದಲ್ಲಿ ಪ್ರತಿದಿನ ಸಾವಿರಾರು ವಿದ್ಯಾರ್ಥಿಗಳು ಸಂಚರಿಸುತ್ತಾರೆ. ಜೊತೆಗೆ ಮಾರುಕಟ್ಟೆ ಸೇರಿ ವಿವಿಧ ವ್ಯವಹಾರಗಳಿಗೆ ತಾಲ್ಲೂಕಿನ ವಿವಿಧ ಭಾಗಗಳಿಂದ ಜನರು ಬರುತ್ತಾರೆ. ಆದರೆ ಪ್ರಮುಖ ರಸ್ತೆಗಳನ್ನು ಫುಟ್‌ಪಾತ್ ವ್ಯಾಪಾರಿಗಳು ಅತಿಕ್ರಮಿಸಿಕೊಂಡಿದ್ದರಿಂದ ಪಾದಚಾರಿಗಳು ನಡುರಸ್ತೆಯಲ್ಲಿ ನಡೆದು ಜೀವಭಯ ಅನುಭವಿಸುತ್ತಿದ್ದರು. ಇದರಿಂದ ಅನೇಕ ಅಪಘಾತಗಳು ಸಂಭವಿಸಿ ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ತಡವಾದರೂ ಈಗಾದರೂ ತೆರವು ಕಾರ್ಯಾಚರಣೆ ಕೈಗೊಂಡಿರುವುದು ಸ್ವಾಗತಾರ್ಹ ಎಂದು ಸಾರ್ವಜನಿಕರು ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

ತೆರವು ಕಾರ್ಯಾಚರಣೆಗೆ ವಿರೋಧ ವ್ಯಕ್ತಪಡಿಸಿದ ವ್ಯಾಪಾರಸ್ಥರು, ನೋಟೀಸ್ ನೀಡದೆ ಏಕಾಏಕಿ ಅಂಗಡಿಗಳಲ್ಲಿದ್ದ ಸರಕುಗಳನ್ನು ತೆಗೆದುಕೊಂಡು ಹೋಗಿದ್ದು, ನಮ್ಮ ವಸ್ತುಗಳನ್ನು ಗುರುತಿಸಲು ಕಷ್ಟವಾಗಿದೆ. ಇಂದಿನ ವ್ಯಾಪಾರದ ನಷ್ಟಕ್ಕೆ ಯಾರು ಹೊಣೆ ಎಂದು ಪ್ರಶ್ನಿಸಿ, ದೊಡ್ಡವರು-ಬಡವರು ಎಂಬ ತಾರತಮ್ಯವಿಲ್ಲದೆ ಎಲ್ಲರಿಗೂ ಒಂದೇ ನ್ಯಾಯ ಸಿಗಬೇಕು ಹಾಗೂ ಶಾಶ್ವತ ಅತಿಕ್ರಮಣಗಳನ್ನು ಮೊದಲು ತೆರವುಗೊಳಿಸಬೇಕೆಂದು ಒತ್ತಾಯಿಸಿದರು.

ಸಣ್ಣ ಪುಟ್ಟ ವ್ಯಾಪಾರ ಮಾಡಿಕೊಂಡು ಜೀವನ ಸಾಗಿಸುತ್ತಿದ್ದೇವೆ. ಇದನ್ನೇ ನಂಬಿ ಪಟ್ಟಣ ಪಂಚಾಯಿತಿಯಿಂದ ಲಕ್ಷಾಂತರ ರೂ. ಸಾಲ ಪಡೆದಿದ್ದೇವೆ. ಏಕಾಏಕಿ ತೆರವುಗೊಳಿಸಿದರೆ ಸಾಲ ತೀರಿಸುವುದು ಹೇಗೆ. ಮಾರುಕಟ್ಟೆಯಲ್ಲಿ ಪ್ರತಿ ದಿನ 50 ರೂ. ಸುಂಕ ವಸೂಲಿ ಮಾಡುತ್ತಾರೆಂದು ಬೀದಿ ಬದಿ ವ್ಯಾಪಾರಿಗಳು ಅಳಲು ತೋಡಿಕೊಂಡರು.

> **ಪ್ರತಿಯೊಬ್ಬರ ಸಹಕಾರ ಅಗತ್ಯ**
> ತಹಶೀಲ್ದಾರ್ ಹೆಚ್.ಮಲ್ಲಿಕಾರ್ಜುನ್ ಅವರು ಮಾತನಾಡಿ, ಪಟ್ಟಣ ಸುಂದರವಾಗಿ ಕಾಣಲು ಹಾಗು ಸಾರ್ವಜನಿಕರು ಸುರಕ್ಷಿತವಾಗಿ ಸಂಚರಿಸಲು ಪ್ರತಿಯೊಬ್ಬರ ಸಹಕಾರ ಅಗತ್ಯ. ಬೀದಿಬದಿ ವ್ಯಾಪಾರಿಗಳು ಮತ್ತು ಕೆಲ ವರ್ತಕರು ನಿಗದಿತ ಸ್ಥಳಕ್ಕಿಂತ ಹೆಚ್ಚಾಗಿ ಪಾದಚಾರಿ ಮಾರ್ಗವನ್ನು ಅತಿಕ್ರಮಿಸಿಕೊಂಡಿದ್ದರಿಂದ ಸಾರ್ವಜನಿಕರು ನಡುರಸ್ತೆಯಲ್ಲಿಯೇ ಸಂಚರಿಸಬೇಕಾದ ಪರಿಸ್ಥಿತಿ ನಿರ್ಮಾಣವಾಗಿ ಅಪಘಾತಗಳೂ ಸಂಭವಿಸುತ್ತಿದ್ದವು. ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದ್ದರಿಂದ, ಪೂರ್ವಭಾವಿ ಸಭೆಯಲ್ಲಿ ಭಾನುವಾರದವರೆಗೆ ಸಮಯಾವಕಾಶ ನೀಡಲಾಗಿತ್ತು. ಆದರೂ ತೆರವುಗೊಳಿಸದ ಹಿನ್ನಲೆ ಇಂದು ಕಾರ್ಯಾಚರಣೆ ನಡೆಸಲಾಗಿದೆ ಎಂದರು.

## ನನ್ನ ದಾಖಲೆ ಮುರಿಯುವ ನಾಯಕರೂ ಬರಬಹುದು

# ದಾಖಲೆಗಳು ಮುರಿಯಲೆಂದೇ ನಿರ್ಮಾಣ: ಸಿಎಂ

• ಪ್ರಜೋದಯ ವರದಿ



**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ದಿ|| ದೇವರಾಜ್ ಅರಸ್ ಅವರ ಮುಖ್ಯಮಂತ್ರಿಯ ಸುದೀರ್ಘ ಅವಧಿಯ ದಾಖಲೆ ಮುರಿದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನರ ಆಶೀರ್ವಾದದಿಂದ ಇದು ಸಾಧ್ಯವಾಗಿದೆ ಎಂದು ತಿಳಿಸಿದರು.

ಮೈಸೂರಿನ ವಿಮಾನ ನಿಲ್ದಾಣದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವರಾಜ್ ಅರಸ್ ಅವರ ಮುಖ್ಯಮಂತ್ರಿ ಸುದೀರ್ಘ ಅವಧಿಯ ದಾಖಲೆಯನ್ನು ಮುರಿಯಲಿರುವ ಬಗ್ಗೆ ಪ್ರತಿಕ್ರಿಯೆ ನೀಡಿ, ಜನರ ಆಶೀರ್ವಾದದಿಂದ ಇದು ಸಾಧ್ಯವಾಗಿದೆ. ಅರಸು ಅವರು ಮೈಸೂರಿನವರೇ ಆಗಿರುವುದು ಸಂತೋಷದ ಸಂಗತಿ. ತಾಲ್ಲೂಕು ಬೋರ್ಡ್ ಸದಸ್ಯನಾದ ನಂತರದ ನನ್ನ ರಾಜಕೀಯ ಜೀವನದಲ್ಲಿ ಸಚಿವನಾಗುವ ಮತ್ತು ಮುಖ್ಯಮಂತ್ರಿಯಾಗುವ ನಿರೀಕ್ಷೆಯಿರಲಿಲ್ಲ. 13 ಚುನಾವಣೆಗಳನ್ನೂ ಎದುರಿಸಿ 8ಕ್ಕೂ ಹೆಚ್ಚು ಬಾರಿ ಗೆಲುವು ಸಾಧಿಸಿದ್ದೇನೆ ಎಂದರು.

ಕಡಿಮೆ ಜನಸಂಖ್ಯೆಯ ಅರಸು ಸಮುದಾಯದವರಾಗಿದ್ದ ದೇವರಾಜ ಅರಸು ಅವರು ಜನಪ್ರಿಯ ನಾಯಕರಾಗಿದ್ದರು. ಅಂತಹ ಮಹಾನ್ ನಾಯಕನಿಗೂ ಮತ್ತು ನನಗೂ ಹೋಲಿಕೆ ಸರಿಯಲ್ಲ. ಅರಸು ಅವರ ಅವಧಿಯಲ್ಲಿ ರಾಜ್ಯದ ಪರಿಸ್ಥಿತಿ ವಿಭಿನ್ನವಾಗಿತ್ತು. ಅವರು ಒಂದು ಬಾರಿ ಚುನಾವಣೆಯಲ್ಲಿ ಸರ್ವಾನುಮತದಿಂದಲೂ ಆಯ್ಕೆಯಾಗಿದ್ದರು. ದಾಖಲೆಗಳು ಮುರಿಯಲೆಂದೇ ನಿರ್ಮಾಣವಾಗುತ್ತವೆ. ಪ್ರಸ್ತುತ ನಾನು ಪೂರೈಸಲಿರುವ ಅವಧಿಯನ್ನು ಮೀರಲಿರುವ ಮತ್ತೊಬ್ಬ ನಾಯಕರೂ ಬರಬಹುದು. ನನಗಿಂತ ಹೆಚ್ಚಿನ ಬಾರಿ ಬಜೆಟ್ ಮಂಡಿಸುವ ನಾಯಕರೂ ಮುಂದೆ ಬರಬಹುದು. ಸಾಧನಾ ಸಮಾವೇಶ ಆಯೋಜಿಸುವ ಬಗ್ಗೆ ನಿರ್ಧಾರ ಕೈಗೊಂಡಿಲ್ಲ ಎಂದರು.

**ತನಿಖೆಯ ನಂತರ ಸತ್ಯಾಸತ್ಯತೆ**

ಬಳ್ಳಾರಿಯಲ್ಲಿ ನಡೆದ ಸಂಘರ್ಷದಲ್ಲಿ ಕಾಂಗ್ರೆಸ್ ಕಾರ್ಯಕರ್ತ ಬಲಿಯಾಗಿರುವ ಘಟನೆಯ ತನಿಖೆಯನ್ನು ಸಿಐಡಿಗೆ ವಹಿಸಲಾಗುವುದೇ ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಈ ಬಗ್ಗೆ ಗೃಹ ಸಚಿವರೊಂದಿಗೆ ಚರ್ಚಿಸುತ್ತೇನೆ. ಪೊಲೀಸ್ ತನಿಖೆಯ ನಂತರ ಘಟನೆಯ ಸತ್ಯಾಸತ್ಯತೆ ತಿಳಿಯಲಿದೆ ಎಂದರು.

**ಕೇಂದ್ರ ಸರ್ಕಾರದಿಂದ ಅನ್ಯಾಯ**

ರಾಜ್ಯಕ್ಕೆ ಜಿಎಸ್‌ಟಿ ಯಿಂದ ವಾರ್ಷಿಕವಾಗಿ 12 ರಿಂದ 15 ಸಾವಿರ ಕೋಟಿ ರೂ. ಗಳು ನಷ್ಟವಾಗುತ್ತಿದೆ. ಇದು ಕೇಂದ್ರ ಸರ್ಕಾರ ರಾಜ್ಯಕ್ಕೆ ಮಾಡುತ್ತಿರುವ ಅನ್ಯಾಯ. ಮಾಜಿ ಪ್ರಧಾನಿ ಮನಮೋಹನ್ ಸಿಂಗ್ ಅವರ ಕಾಲದಿಂದಲೂ ಮನರೇಗಾ ಯೋಜನೆಗೆ ಸಂಪೂರ್ಣವಾಗಿ ಕೇಂದ್ರವೇ ಅನುದಾನ ನೀಡುತ್ತಿತ್ತು. ಆದರೆ, ಈಗ ಈ ಯೋಜನೆಯನ್ನು ರದ್ದುಪಡಿಸಿದ್ದು, ಅದರಿಂದ ಕಾರ್ಮಿಕರು, ಸಣ್ಣರೈತರು, ಮಹಿಳೆಯರು, ದಲಿತರು, ಹಿಂದುಳಿದವರು, ಅಲ್ಪಸಂಖ್ಯಾತರು, ಬಡವರಿಗೆ ನೀಡಲಾಗುತ್ತಿದ್ದ ಕೆಲಸದ ದಿನಗಳನ್ನು ಕಡಿಮೆಯಾಗಲಿದ್ದು, ಜನರ ಮೂಲಭೂತ ಹಕ್ಕಿಗಳನ್ನು ಕಸಿದುಕೊಳ್ಳಲಾಗುತ್ತಿದೆ. ಇದು ಅಸಂವಿಧಾನಿಕ ಕ್ರಮ. ಈ ಕಾಯ್ದೆಯಂತೆ ಕಾಮಗಾರಿಗಳಿಗೆ ಕೇಂದ್ರ ಮತ್ತು ರಾಜ್ಯ 60:40 ರಷ್ಟು ಅನುದಾನವನ್ನು ನೀಡಬೇಕಾ ಗಿದೆ. ಅದರಿಂದ ರಾಜ್ಯಸರ್ಕಾರದ ಮೇಲೆ ಸುಮಾರು 3000 ಕೋಟಿ ರೂ.ಗಳ ಹೊರೆ ಬೀಳಲಿದೆ ಎಂದರು.

> **ಸಂಪುಟ ಪುನಾರಚನೆ ಚರ್ಚಿಸಿ ನಿರ್ಧಾರ**
> ಬಜೆಟ್ ತಯಾರಿಯನ್ನು ಸಂಕ್ರಾಂತಿಯ ನಂತರ ಪ್ರಾರಂಭಿಸಲಾಗುವುದು. ಸಂಪುಟ ಪುನಾರಚನೆಯ ಬಗ್ಗೆ ಕಾಂಗ್ರೆಸ್ ವರಿಷ್ಠರಾದ ರಾಹುಲ್ ಗಾಂಧಿ ಅವರೊಂದಿಗೆ ಚರ್ಚಿಸಲಾಗು ವುದು. ಅವರು ಸಮಯ ನೀಡಿದರೆ ಚರ್ಚಿಸಲಿರುವುದಾಗಿ ತಿಳಿಸಿದರು.

# ಆಟೋ ಚಾಲಕನಿಗೆ ಚಾಕುವಿನಿಂದ ಇರಿತ

• ಪ್ರಜೋದಯ ವರದಿ

**ಹಾಸನ:** ಕಾರಿಗೆ ಆಟೋ ಅಡ್ಡ ಬಂದ ಸಣ್ಣ ಕಾರಣಕ್ಕೆ ಐವರು ಅಪರಿಚಿತರು ಆಟೋ ಚಾಲಕನಿಗೆ ಮನಬಂದಂತೆ ಥಳಿಸಿ, ಚಾಕುವಿನಿಂದ ಬೆನ್ನಿನ ಭಾಗಕ್ಕೆ ಇರಿದಿರುವ ಘಟನೆ ನಗರ ಹೊರವಲಯದ ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿಯ ರಜತ್ ಡಾಬಾ ಬಳಿ ಇತ್ತೀಚೆಗೆ ನಡೆದಿದೆ.

ಶಾಂತಿಗ್ರಾಮ ಹೋಬಳಿ ಸಮುದ್ರವಳ್ಳಿ ಗ್ರಾಮದ ಪ್ರಸನ್ನ ಎಂಬುವವರು ಗಾಯಗೊಂಡಿದ್ದಾರೆ. ಜ.2ರ ಸಂಜೆ 7 ಗಂಟೆ ಸಮಯದಲ್ಲಿ ಮನೆಗೆ ಹೋಗುತ್ತಿದ್ದಾಗ ರಸ್ತೆ ಪಕ್ಕದ ಡೈರಿಯಲ್ಲಿ ಹಾಲು, ಮೊಸರು ಖರೀದಿಸಿ ಆಟೋವನ್ನು ರಸ್ತೆಯ ಕಡೆ ತಿರುಗಿಸಿದಾಗ ಹಾಸನ ಕಡೆಯಿಂದ ವೇಗವಾಗಿ ಬಂದ ಕಾರು ಚಾಲಕ ವಾಹನ ನಿಲ್ಲಿಸಿ ರಸ್ತೆಗೆ ಅಡ್ಡ ಬರುತ್ತೀಯಾ ಎಂದು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾನೆ. ಇಬ್ಬರ ನಡುವೆ ಮಾತಿಗೆ ಮಾತು ಬೆಳೆದು ಕಾರಿನಲ್ಲಿದ್ದ ಇತರ ನಾಲ್ವರು ಥಳಿಸಿದ್ದಾರೆ. ಅದರಲ್ಲಿ ಒಬ್ಬ ಚಾಕುವಿನಿಂದ ಬೆನ್ನಿನ ಭಾಗಕ್ಕೆ ಇರಿದಿದ್ದಾನೆ. ಸ್ಥಳೀಯರು ಜಗಳ ಬಿಡಿಸಿ ಪ್ರಸನ್ನ ಅವರನ್ನು ಹಿಮ್ಸ್‌ಗೆ ದಾಖಲಿಸಿದ್ದಾರೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಹಣಕಾಸು ವೈಷಮ್ಯ: ಯುವಕನ ಮೇಲೆ ಹಲ್ಲೆ

• ಪ್ರಜೋದಯ ವರದಿ

**ಹಾಸನ:** ಹಣಕಾಸಿನ ವಿಚಾರವಾಗಿ ನಾಲ್ವರು ಸೇರಿ ಯುವಕನ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿರುವ ಘಟನೆ ರಾಜಘಟ್ಟದ ಗದ್ದೆಹಳ್ಳದಲ್ಲಿ ಇತ್ತೀಚೆಗೆ ನಡೆದಿದೆ.

ರಾಜಘಟ್ಟದ ನಿಖಿಲ್‌ಗೌಡ ಎಂಬಾತನ ಮೇಲೆ ಮಂಜುನಾಥ್ ಹಾಗು ಪುತ್ರರಾದ ಮಹೇಶ್, ಪ್ರತಾಪ್, ಚಂದನ್ ಹಲ್ಲೆ ನಡೆಸಿದ್ದಾರೆಂದು ತಿಳಿದುಬಂದಿದೆ. ನಿಖಿಲ್‌ಗೌಡ ಹಾಗು ಸ್ನೇಹಿತರು ಜ.3ರ ಸಂಜೆ ಗದ್ದೆಹಳ್ಳದಲ್ಲಿ ಮದ್ಯ ಸೇವಿಸುತ್ತಾ ಕುಳಿತಿದ್ದಾಗ ಅಲ್ಲಿಗೆ ಬಂದ ಮಂಜುನಾಥ ಮತ್ತು ಪುತ್ರರು, ನಮಗೆ ಹೊಡೆಯುತ್ತಿಯಾ ಎಂದು ಜಗಳ ಸೃಷ್ಟಿಸಿ ಅವಾಚ್ಯ ಶಬ್ದಗಳಿಂದ ನಿಂದಿಸುತ್ತಾ ಚಾಕುವಿನಿಂದ ನಿಖಿಲ್‌ಗೌಡನ ಹೊಟ್ಟೆಗೆ ಇರಿದಿದ್ದಾರೆ.

ಗಂಭೀರ ಗಾಯಗೊಂಡಿರುವ ಯುವಕನನ್ನು ಹಿಮ್ಸ್‌ಗೆ ದಾಖಲಿಸಲಾಗಿದೆ. ಹಣದ ವಿಚಾರವಾಗಿ ದ್ವೇಷವಿತ್ತು ಎನ್ನಲಾಗಿದೆ. ಬಡಾವಣೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಪ್ರಜೋದಯ ದಿನಪತ್ರಿಕೆ, ಸಂಪಾದಕ, ಪ್ರಕಾಶಕ ಮತ್ತು ಮುದ್ರಕರು, ಜೆ.ಆರ್.ಕೆಂಚೇಗೌಡ, ಗಂಧದ ಕೋಠಿ ಹಿಂಭಾಗ, ಕೆ.ಆರ್.ಪುರಂ.ಹಾಸನ. ದೂರವಾಣಿ : 08172-231188, ಮೊ: 9449203019